ಸಂಪುಟ : 11 ಸಂಚಿಕೆ: 38 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 11 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 38 Pages : 4+2 Price : 3.00 Wednesday March 11 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಿಎ ಪರೀಕ್ಷೆಯಲ್ಲಿ ಮೊದಲ ಪ್ರಯತ್ನದಲ್ಲೇ ಯಶಸ್ಸು ಸಾಧಿಸಿದ ಮದನ್ ಶೇಖರಪ್ಪ ಗಂಜಿ

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ



ನೇಕಾರಿ ಕುಟುಂಬದ ಮದನ್ ಶೇಖರಪ್ಪ ಗಂಜಿ, ತಮ್ಮ 22ನೇ ವಯಸ್ಸಿನಲ್ಲಿ ಮೊದಲ ಬಾರಿಗೆ ಸಿ.ಎ. ಪರೀಕ್ಷೆಯಲ್ಲಿ ತೇರ್ಗಡೆ–ಯಾಗಿ ನೇಕಾರ ಸಮುದಾಯ ಮತ್ತು ದೇವಾಂಗ ಸಮಾಜದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಮದನ್ ಅವರು ತಮ್ಮ ವಿದ್ಯಾಭ್ಯಾಸವನ್ನು ಲೊಯೊಲಾ ಶಾಲೆಯಲ್ಲಿ ಆರಂಭಿಸಿ ಎನ್.ಎಮ್.ಎಮ್.ಎಸ್. ಸ್ಕಾಲರ್‌ಶಿಪ್ ಪಡೆದುಕೊಂಡು ಎಸ್.ಎಸ್.ಎಲ್.ಸಿ ಯಲ್ಲಿ 91.5% ಅಂಕಗಳನ್ನು ಪಡೆದಿದ್ದರು. ನಂತರ, ಜೆ.ಜಿ. ಕಾಲೇಜ್ ಆಫ್ ಕಾಮರ್ಸ್, ಹುಬ್ಬಳ್ಳಿಯಲ್ಲಿ ಪಿ.ಯು.ಸಿ. ದ್ವಿತೀಯ ವರ್ಷದಲ್ಲಿ 95.5% ಅಂಕಗಳೊಂದಿಗೆ ತಮ್ಮ ಸಾಧನೆ ಮುಂದುವರೆಸಿದರು.

ಮದನ್ ಗಂಜಿ ಸಿ.ಎ. ಗುರಿ ಹೊಂದಿ ಫೌಂಡೇಶನ್ ಹಂತದಲ್ಲಿ ತೇರ್ಗಡೆಯಾದರು. ಬಳಿಕ ಸಿ.ಎ. ಇಂಟರ್‌ಮಿಡಿಯೇಟ್‌ನ ಎರಡೂ ಗ್ರೂಪ್ಗಳಲ್ಲಿ ಒಂದೇ ಸಲ ತೇರ್ಗಡೆ ಸಾಧಿಸಿದರು. ಬೆಂಗಳೂರಿನಲ್ಲಿ ಬಿ.ಸಿ. ಶೆಟ್ಟಿ ಕಂಪನಿಯಲ್ಲಿ ಆರ್ಟಿಕಲ್‌ಶಿಪ್ ಮುಗಿಸಿದ ನಂತರ, ಸಿ.ಎ. ಫೈನಲ್‌ನ ಎರಡೂ ಗ್ರೂಪ್‌ಗಳನ್ನು ಒಂದೇ ಬಾರಿ ಪಾಸಾಗಿ ತೀರ್ಮಾನಿಸಿದರು.

ಈ ಸಾಧನೆಯಿಂದ ಬೆಟಗೇರಿ ಭಾಗದ ನೇಕಾರಿಕೆ ಉದ್ದಿಮೆಯ ಗಂಜಿಯವರ ಕುಟುಂಬ ಮಾತ್ರವಲ್ಲ, ದೇವಾಂಗ ಸಮಾಜಕ್ಕೂ ಹೆಮ್ಮೆಯ ವಿಷಯವಾಗಿದೆ. ಸಮಾಜದಲ್ಲಿ ವಿದ್ಯಾಭ್ಯಾಸ ಮತ್ತು ಪ್ರತಿಭೆಯನ್ನು ಉತ್ತೇಜಿಸುವ ಉದಾಹರಣೆಯಾಗಿ ಮದನ್ ಗಂಜಿಯವರ ಹೆಸರು ಬೆಳಕಿಗೆ ಬಂದಿದೆ. ನೇಕಾರ ಸಮುದಾಯ ಮತ್ತು ದೇವಾಂಗ ಸಮಾಜದ ಸಮಸ್ತ ಸದಸ್ಯರು ಮದನ್ ಅವರಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

## ಮಾ. 17ರಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 05ರಂದು ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 119ನೇ ಜನ್ಮದಿನ ಹಾಗೂ ಎಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆಯ ಅಂಗವಾಗಿ ಮಾರ್ಚ್ 17ರಂದು ಪೂರ್ವಭಾವಿ ಸಭೆ ನಡೆಯಲಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಧ್ಯಾಹ್ನ 3.00 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಆಡಿಟೋರಿಯಂ ಹಾಲ್‌ನಲ್ಲಿ ಸಭೆ ನಡೆಯಲಿದೆ.

ಜಯಂತಿ ಆಚರಣೆಯ ಕುರಿತು ಚರ್ಚೆ ನಡೆಸಲು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮುಖಂಡರು, ವಿವಿಧ ಸಮುದಾಯಗಳ ಮುಖಂಡರು ಮತ್ತು ಸಾರ್ವಜನಿಕರು ಸಭೆಗೆ ಆಗಮಿಸಿ ತಮ್ಮ ಸಲಹೆ–ಸೂಚನೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾರ್ಚ್ 18ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಆರಂಭ– ಜಿಲ್ಲೆಯಲ್ಲಿ 61 ಕೇಂದ್ರಗಳಲ್ಲಿ 17,146 ವಿದ್ಯಾರ್ಥಿಗಳು ಪರೀಕ್ಷೆ– ಡಿಸಿ ಶ್ರೀಧರ್

# ಪರೀಕ್ಷೆಗಳನ್ನು ಶಾಂತಿಯುತ, ಪಾರದರ್ಶಕ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಾರ್ಚ್ 18ರಿಂದ ಎಪ್ರಿಲ್ 2ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಅನ್ನು ಯಾವುದೇ ಅಕ್ರಮಗಳಿಗೆ ಅವಕಾಶ ನೀಡದೇ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಸೂಕ್ತ ಆಸನ ವ್ಯವಸ್ಥೆ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ತಿಳಿಸಿದರು.





ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಯಾವುದೇ ಅಕ್ರಮ ಅಥವಾ ಲೋಪದೋಷಗಳು ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ ಮಾತನಾಡಿ, ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 17,146 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್ ಹಾಗೂ ಪರೀಕ್ಷಾರ್ಥಿಗಳಿಗೆ ಕೇಂದ್ರಗಳಿಗೆ ಹೋಗಿ ಬರಲು ಅನುಕೂಲವಾಗುವಂತೆ ಸಾರಿಗೆ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಡಯಟ್ ಪ್ರಾಚಾರ್ಯ ಜೆ.ಎಂ. ಮುಂದಿನಮನಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

> "ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಹತ್ವದ್ದಾಗಿವೆ. ಯಾವುದೇ ಅಕ್ರಮಗಳಿಗೆ ಅವಕಾಶ ನೀಡದೇ ಪರೀಕ್ಷೆಗಳನ್ನು ಶಾಂತಿಯುತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು."
> – ಸಿ.ಎನ್. ಶ್ರೀಧರ್
> ಜಿಲ್ಲಾಧಿಕಾರಿ, ಗದಗ

1. ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ವೇಳಾಪಟ್ಟಿ
2. ಮಾರ್ಚ್ 18 : ಪ್ರಥಮ ಭಾಷೆ (ಕನ್ನಡ ಸೇರಿದಂತೆ ಇತರೆ ಭಾಷೆಗಳು)
3. ಮಾರ್ಚ್ 23 : ವಿಜ್ಞಾನ / ರಾಜ್ಯಶಾಸ್ತ್ರ, ಸಂಗೀತ
4. ಮಾರ್ಚ್ 25 : ದ್ವಿತೀಯ ಭಾಷೆ (ಇಂಗ್ಲೀಷ್ / ಕನ್ನಡ)
5. ಮಾರ್ಚ್ 28 : ಗಣಿತ / ಸಮಾಜಶಾಸ್ತ್ರ
6. ಮಾರ್ಚ್ 30 : ತೃತೀಯ ಭಾಷೆ ಹಾಗೂ ಎನ್‌ಎಸ್‌ಕ್ಯೂಎಫ್ ವಿಷಯಗಳು
7. ಎಪ್ರಿಲ್ 1 : ಎಂಜಿನಿಯರಿಂಗ್ ಹಾಗೂ ಅರ್ಥಶಾಸ್ತ್ರ ವಿಷಯಗಳು
8. ಎಪ್ರಿಲ್ 2 : ಸಮಾಜ ವಿಜ್ಞಾನ

1. ಜಿಲ್ಲೆಯಲ್ಲಿ 61 ಪರೀಕ್ಷಾ ಕೇಂದ್ರಗಳು
2. 17,146 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ
3. ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿ
4. ಪೊಲೀಸ್ ಬಂದೋಬಸ್ತ್ ಹಾಗೂ ಸಾರಿಗೆ ವ್ಯವಸ್ಥೆ
5. ಮೂಲಭೂತ ಸೌಲಭ್ಯಗಳ ಕಲ್ಪನೆಗೆ ಕ್ರಮ

### 500–600 ವರ್ಷದ ಹಳೆಯ ದೇವಿ ಆಭರಣಗಳಾಗಿರಬಹುದೆಂಬ ತಜ್ಞರ ಅಭಿಪ್ರಾಯ

# ಲಕ್ಕುಂಡಿಯಲ್ಲಿ ಪತ್ತೆಯಾದ ಚಿನ್ನದ ನಿಧಿಯ ರಹಸ್ಯ ಬಯಲು!

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಪತ್ತೆಯಾಗಿದ್ದ ಚಿನ್ನದ ನಿಧಿಯ ಕುರಿತು ಮಹತ್ವದ ಮಾಹಿತಿ ಬಹಿರಂಗವಾಗಿದೆ. 2026 ಜನವರಿ 10ರಂದು ಲಕ್ಕುಂಡಿ ಗ್ರಾಮದ ರಿತ್ತಿ ಕುಟುಂಬದ ಮನೆಯ ಪಾಯದಲ್ಲಿ ಸುಮಾರು 465 ಗ್ರಾಂ ತೂಕದ ಚಿನ್ನದ ಆಭರಣಗಳ ನಿಧಿ ಪತ್ತೆಯಾಗಿತ್ತು.

ಈ ನಿಧಿಯ ಕುರಿತು ರಾಜ್ಯ ಸರ್ಕಾರ ರಚಿಸಿದ ತಜ್ಞರ ತಂಡವು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ನೇತೃತ್ವದಲ್ಲಿ ಪರಿಶೀಲನೆ ನಡೆಸಿದ್ದು, ಆಭರಣಗಳು ಸುಮಾರು 500 ರಿಂದ 600 ವರ್ಷಗಳ ಹಿಂದಿನ ಕಾಲಘಟ್ಟಕ್ಕೆ ಸೇರಿದವು ಎಂಬ ಪ್ರಾಥಮಿಕ ಅಭಿಪ್ರಾಯ ವ್ಯಕ್ತಪಡಿಸಿದೆ.

ಜಿಲ್ಲಾಡಳಿತ ಭವನದ ಖಜಾನೆಯಲ್ಲಿ ಸುರಕ್ಷಿತವಾಗಿ ಇಡಲಾಗಿದ್ದ ಚಿನ್ನದ ನಿಧಿಯನ್ನು ಹೊರತೆಗೆದು ನಾಲ್ಕುರಿಂದ ಐದು ಗಂಟೆಗಳ ಕಾಲ ತಜ್ಞರು ಸೂಕ್ಷ್ಮ ಪರಿಶೀಲನೆ ನಡೆಸಿದರು. ಪ್ರತಿಯೊಂದು ಆಭರಣವನ್ನು ಫೋಟೋಗ್ರಾಫಿ ಮಾಡಿ ಅದರ ವಿನ್ಯಾಸ ಹಾಗೂ ತಯಾರಿಕಾ ಶೈಲಿಯನ್ನು ಅಧ್ಯಯನ ಮಾಡಲಾಯಿತು.



ಪರಿಶೀಲನೆ ವೇಳೆ ಈ ಆಭರಣಗಳು ಹೆಣ್ಣು ದೇವರ ಮೂರ್ತಿಗಳಿಗೆ ಅಥವಾ ಉತ್ಸವ ಮೂರ್ತಿಗಳಿಗೆ ಅಲಂಕರಿಸಲು ಬಳಸುತ್ತಿದ್ದವು ಎಂಬ ಸಾಧ್ಯತೆ ವ್ಯಕ್ತವಾಗಿದೆ. ಕೆಲವು ಆಭರಣಗಳಲ್ಲಿ ಹೆಣ್ಣು ದೇವರ ಆಕೃತಿ ಕಂಡು ಬಂದಿದ್ದು, ಅವುಗಳಲ್ಲಿ ನೀಲಮಣಿ, ಸ್ಪಟಿಕ, ಹವಳ ಸೇರಿದಂತೆ ಅಪರೂಪದ ರತ್ನಗಳನ್ನು ಬಳಸಿ ತಯಾರಿಸಿರುವುದು ವಿಶೇಷವಾಗಿದೆ.

ಪರಿಶೀಲನೆಗೆ ಪುರಾತತ್ವ ಶಾಸ್ತ್ರಜ್ಞರು ಹಾಗೂ ಸಮಿತಿಯ ಅಧ್ಯಕ್ಷ ಎಂ.ಎಸ್. ಕೃಷ್ಣಮೂರ್ತಿ, ಕಲಾ ಇತಿಹಾಸಗಾರ ರಾಘವೇಂದ್ರ ಕುಲಕರ್ಣಿ, ಕಲಾ ಇತಿಹಾಸಗಾರ್ತಿ ಪ್ರೊ. ಚೂಡಾಮಣಿ ನಂದಗೋಪಾಲ, ಶಾಸನ ತಜ್ಞ ಹಾಗೂ ಇತಿಹಾಸಗಾರ ಹನುಮಾಪಕ್ಷಿ ಗೋಗಿ, ಗೋಲ್ಡ್ ಸ್ಮಿತ್ ಹಾಗೂ ರತ್ನಶಾಸ್ತ್ರಜ್ಞ ಪ್ರಭು ಕಮ್ಮಾರ ಹಾಗೂ ಪುರಾತತ್ವ ಇಲಾಖೆ ಅಧಿಕಾರಿ ಡಾ. ಶೇಜೇಶ್ವರ ಸೇರಿದಂತೆ ತಜ್ಞರು ಭಾಗವಹಿಸಿದ್ದರು.

> "ಆಭರಣಗಳ ವಿನ್ಯಾಸ ಹಾಗೂ ರತ್ನಗಳ ಬಳಕೆ ನೋಡಿದಾಗ ಅವು ದೇವಾಲಯದ ಉತ್ಸವ ಮೂರ್ತಿಗಳಿಗೆ ಬಳಸುತ್ತಿದ್ದ ಆಭರಣಗಳಾಗಿರಬಹುದೆಂಬ ಸಾಧ್ಯತೆ ಇದೆ."
> – ಎಂ.ಎಸ್. ಕೃಷ್ಣಮೂರ್ತಿ, ಪುರಾತತ್ವ ಶಾಸ್ತ್ರಜ್ಞರು

> "ಕೆಲವು ಆಭರಣಗಳಲ್ಲಿ ಅಪರೂಪದ ರತ್ನಗಳು ಹಾಗೂ ವಿಶಿಷ್ಟ ಚಿನ್ನದ ಕೆಲಸ ಕಾಣುತ್ತದೆ. ಇದು ಪ್ರಾಚೀನ ಕಲಾತ್ಮಕತೆಯ ಉತ್ತಮ ಉದಾಹರಣೆ."
> – ಪ್ರಭು ಕಮ್ಮಾರ, ಗೋಲ್ಡ್ ಸ್ಮಿತ್ ಹಾಗೂ ರತ್ನಶಾಸ್ತ್ರಜ್ಞರು

> "ಲಕ್ಕುಂಡಿಯಲ್ಲಿ ಪತ್ತೆಯಾದ ಚಿನ್ನದ ಆಭರಣಗಳು ಸುಮಾರು 500 ರಿಂದ 600 ವರ್ಷಗಳ ಹಿಂದಿನ ಕಾಲಘಟ್ಟಕ್ಕೆ ಸೇರಿರಬಹುದೆಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಅವುಗಳನ್ನು ಸಂಪೂರ್ಣವಾಗಿ ಪರಿಶೀಲಿಸಲಾಗುತ್ತಿದೆ."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ

### ಜನರ ನಡುವೆ ಕೃಷ್ಣಗೌಡ ಎಚ್. ಪಾಟೀಲ

# ವಾರ್ಡ್‌ಗಳಿಗೆ ಭೇಟಿ ನೀಡಿ ಸಮಸ್ಯೆಗಳಿಗೆ ಸ್ಪಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಯುವ ನಾಯಕ ಕೃಷ್ಣಗೌಡ ಎಚ್. ಪಾಟೀಲ ಅವರು ನಗರದ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಲ್ಪಿಸುವ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ.

ನಾಲ್ಕನೇ ವಾರ್ಡ್ ಗೆ ಭೇಟಿ ನೀಡಿದ ವೇಳೆ ಅವರು ಸ್ಥಳೀಯ ನಿವಾಸಿಗಳ ಸಮಸ್ಯೆಗಳನ್ನು ಗಮನದಿಂದ ಕೇಳಿ, ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಅವುಗಳನ್ನು ಪರಿಹರಿಸಲು ಕ್ರಮ ಕೈಗೊಳ್ಳುತ್ತಿದ್ದಾರೆ. ಜನ'ರಿದ'ದ್ಲಲ್ಲಿ೦ು'ೀ ತೆರಳಿ ಸಮಸ್ಯೆಗಳಿಗೆ ಸ್ಪ೦ದಿಸ'ುತ್ತಿರ'ುವ'ುದ'ು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ. ಇದರ ಪರಿಣಾಮವಾಗಿ ಕೃಷ್ಣಗೌಡ ಎಚ್. ಪಾಟೀಲರ ಮೇಲೆ ಜನರಲ್ಲಿ ವಿಶ್ವಾಸ ಹೆಚ್ಚುತ್ತಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಕೃಷ್ಣಗೌಡ ಎಚ್. ಪಾಟೀಲ ಅವರು ಮಾಡುತ್ತಿರುವ ಜನಸೇವೆ ಇನ್ನಷ್ಟು ವಿಸ್ತಾರವಾಗಲಿ ಎಂದು ವಾರ್ಡ್ ಸದಸ್ಯೆ ಶ್ರೀಮತಿ ಶಕುಂತಲಾ ಅಕ್ಕಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಯುವ ಮುಖಂಡರಾದ ಸೂರಜ್ ಜಮದಾರ್, ಗದಗ–ಬೆಟಗೇರಿ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅನ್ವರ್ ಕೆ. ನದಾಫ್, ಅಭಿಷಯ್, ಮಂಜು ಹಣಗಿ, ಅಶೋಕ್ ಭಜಂತ್ರಿ, ಪ್ರತೀಕ್ ಮೇಳನವರ, ನೀಲಿ ಮಂಜು ಸೇರಿದಂತೆ ವಾರ್ಡ್‌ನ ಯುವಕರು ಆಶಿಸಿದರು.

### ಧಾರವಾಡದಲ್ಲಿ ನಡೆದ ಮೀಡಿಯಾ ಫೆಸ್ಟ್–2026 ಸಮಾರೋಪ ಸಮಾರಂಭದಲ್ಲಿ ಡಾ. ಶಂಕರೆಪ್ಪ ವಣಿಕ್ಯಾಳ ಅಭಿಪ್ರಾಯ

# ಪತ್ರಕರ್ತರು ಪಾರದರ್ಶಕವಾಗಿ ಸುದ್ದಿಗಳನ್ನು ಪ್ರಕಟಿಸಬೇಕು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸ್ಪರ್ಧಾತ್ಮಕತೆಯನ್ನು ಹೊಂದಿದ ಕ್ಷೇತ್ರ ಪತ್ರಿಕೋದ್ಯಮವಾಗಿದ್ದು, ದಿನಪತ್ರಿಕೆಗಳು ದಿನನಿತ್ಯ ಸುದ್ದಿ, ಜಾಹೀರಾತು ಹಾಗೂ ಪ್ರಕಟಣೆಯಲ್ಲಿ ಪಾರದರ್ಶಕತೆ ಮತ್ತು ಸಮಾಜದ ಅನೇಕ ಸವಾಲುಗಳನ್ನು ಎದುರಿಸುತ್ತವೆ. ಪತ್ರಕರ್ತರು ಪಾರದರ್ಶಕವಾಗಿ ಸುದ್ದಿಗಳನ್ನು ಪ್ರಕಟಿಸುವುದರಿಂದ ಅನೇಕ ಸಾಮಾಜಿಕ ತೊಡಕುಗಳು ನಿವಾರಣೆಯಾಗಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ ಡಾ. ಶಂಕರೆಪ್ಪ ವಣಿಕ್ಯಾಳ ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಸಹಯೋಗದಲ್ಲಿ ಕವಿವಿ ಕನಕ ಅಧ್ಯಯನ ಪೀಠದ ಸಭಾಂಗಣದಲ್ಲಿ ಆಯೋಜಿಸಿದ್ದ ಮೀಡಿಯಾ ಫೆಸ್ಟ್2026 ಸಮಾರೋಪ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಪತ್ರಕರ್ತರು ತಮ್ಮ ಪಕ್ಷಾತೀತ ಮತ್ತು ನಿರ್ಭೀತಿಯ ಕೆಲಸದಿಂದ ಸಮಾಜಕ್ಕೆ ಮಾರ್ಗದರ್ಶಕರಾಗಿದ್ದಾರೆ. ವ್ಯವಸ್ಥೆಯ ಅಂಕುಡೊಂಕು ತಿದ್ದಲು ಪ್ರತಿನಿತ್ಯ ಅವರು ಪ್ರಕಟಿಸುವ ವಿವಿಧ ರೀತಿಯ ಸುದ್ದಿಗಳು ಸಹಕಾರಿಯಾಗಿವೆ ಎಂದರು.



ಪತ್ರಕರ್ತನಿಗೆ ಅನ್ಯಾಯ ಮತ್ತು ಅವ್ಯವಸ್ಥೆಯನ್ನು ಎದುರಿಸುವ ತಾಕತ್ತು ಇರಬೇಕು. ಯಾವುದೇ ಮುಲಾಜುಗಳಿಗೆ ಒಳಗಾಗದೇ ಸದಾಕಾಲ ಸತ್ಯದ ಪರವಾಗಿ ನಿಲ್ಲಬೇಕು. ಇದರಿಂದ ಪತ್ರಿಕೋದ್ಯಮದ ವೃತ್ತಿಪರತೆ ಹಾಗೂ ಪತ್ರಕರ್ತನ ವ್ಯಕ್ತಿಗೌರವ ಸಮಾಜದಲ್ಲಿ ಎತ್ತಿಹಿಡಿಯಲ್ಪಡುತ್ತದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಧಾರವಾಡ ಜಿಲ್ಲಾ ಅಧ್ಯಕ್ಷ ಹಾಗೂ ವಿಜಯ ಕರ್ನಾಟಕ ದಿನಪತ್ರಿಕೆಯ ಹುಬ್ಬಳ್ಳಿ ಸ್ಥಾನಿಕ ಸಂಪಾದಕರಾದ ಬಂಡು ಕುಲಕರ್ಣಿ ಮಾತನಾಡಿ, ಪತ್ರಿಕೆಯನ್ನು ಓದುವವರಿಗಿಂತ ನೋಡುವವರ ಸಂಖ್ಯೆ ಹೆಚ್ಚಾಗಿದೆ. ಸಾಮಾಜಿಕ ಜಾಲತಾಣಗಳಿಂದ ಪ್ರತಿಯೊಬ್ಬ ನಾಗರೀಕರು ಪತ್ರಕರ್ತರಾಗಿ ಪರಿವರ್ತನೆ ಆಗುತ್ತಿರುವ ಪರಿಸ್ಥಿತಿ ಇದೆ. ಇಂದಿನ ಪತ್ರಿಕಾ ಮಾಧ್ಯಮದಲ್ಲಿ ಭಾಷಾ ಶುದ್ಧತೆ ಕಡಿಮೆಯಾಗಿದ್ದು, ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಬರೆಯುವುದು ಅವಶ್ಯಕವಾಗಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ಕವಿವಿ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ. ಸಂಜೀವಕುಮಾರ ಮಾಲಗತ್ತಿ ವಹಿಸಿದ್ದರು. ಕವಿವಿ ಪತ್ರಿಕೋದ್ಯಮ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ ಡಾ. ಎ.ಎಸ್. ಬಾಲಸುಬ್ರಮಣ್ಯ, ಬಸವರಾಜ ಕಂಬಿ, ಹಿರಿಯ ಪತ್ರಕರ್ತ ಸುಭಾಷ್ ಹೂಗಾರ, ಪ್ರಸನ್ನಕುಮಾರ ಹಿರೇಮಠ, ಸಹಾಯಕ ಪ್ರಾಧ್ಯಾಪಕರಾದ ಡಾ. ವೆಂಕನಗೌಡ ಪಾಟೀಲ, ಡಾ. ಪ್ರಭಾಕರ ಕಾಂಬಳೆ, ಡಾ. ವಿಶ್ವನಾಥ ಚಿಂತಾಮಣಿ, ಡಾ. ಚಿದಾನಂದ ಕಮ್ಮಾರ ಮತ್ತಿತರರು ಉಪಸ್ಥಿತರಿದ್ದರು.

> "ಪತ್ರಿಕೋದ್ಯಮದಲ್ಲಿ ತನಿಖಾ, ಅಭಿವೃದ್ಧಿ ಹಾಗೂ ಮಹಿಳಾ ಪತ್ರಿಕೋದ್ಯಮ ಪ್ರಮುಖ ಪಾತ್ರವಹಿಸುತ್ತವೆ. ಮಾಧ್ಯಮವನ್ನು ಸಮಾಜದ ಕಾವಲು ನಾಯಿಯಾಗಿ ಪರಿಗಣಿಸಲಾಗುತ್ತದೆ. ಪತ್ರಕರ್ತರು ತಮ್ಮ ಮೂಲ ಕರ್ತವ್ಯವನ್ನು ಮರೆಯದೆ ಸಮಾಜದ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಕೆಲಸ ಮಾಡಬೇಕು."
> – ಮಲ್ಲಿಕಾರ್ಜುನ ಸಿದ್ದಣ್ಣವರ,
> ಕನ್ನಡಪ್ರಭ ಹುಬ್ಬಳ್ಳಿ ಸ್ಥಾನಿಕ ಸಂಪಾದಕ

## ಯೂಟ್ಯೂಬ್‌ನಲ್ಲಿ ಧೂಳೆಬ್ಬಿಸುತ್ತಿದೆ 'ಫ್ಯೂಚರ್ ಪ್ಲಾನ್' ಆಲ್ಬಮ್ ಸಾಂಗ್



■ವಿಜಯಸಾಕ್ಷಿ ಸುದ್ದಿ, ಮೈಸೂರು

ಅನು ಸಾರಾ ಆಡಿಯೋ ನಿರ್ಮಾಣದ ಉತ್ತರ ಕರ್ನಾಟಕ ಶೈಲಿಯ 'ಫ್ಯೂಚರ್ ಪ್ಲಾನ್' ಆಲ್ಬಮ್ ಸಾಂಗ್ ಬಿಡುಗಡೆಯಾದ ಬಳಿಕ ಯೂಟ್ಯೂಬ್‌ನಲ್ಲಿ ಭರ್ಜರಿ ಪ್ರತಿಕ್ರಿಯೆ ಪಡೆದು ಸದ್ದು ಮಾಡುತ್ತಿದೆ.

ವಿಭಿನ್ನ ಶೈಲಿಯ ಸಾಹಿತ್ಯ ಮತ್ತು ಮನರಂಜನೆಯ ನೃತ್ಯದೊಂದಿಗೆ ಈ ಹಾಡು ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

"ಫ್ಯೂಚರ್ ಪ್ಲಾನ್ ಹಾಕೂನಂತ ಪಿಚ್ಚರ ತಗದ, ಮೈ ಮೇಲೆ ಏರಿ ಬರತಿ ಯಾಕ ಸಿಡದ" ಎಂಬ ಸಾಲುಗಳಿಂದ ಆರಂಭವಾಗುವ ಈ ಹಾಡು ಯುವಜನತೆಯನ್ನು ಸೆಳೆಯುತ್ತಿದೆ. ವಿಶೇಷವೆಂದರೆ ಮಾಜಿ ಸಚಿವ ಸಾರಾ ಮಹೇಶ್ ಅವರ ಧರ್ಮಪತ್ನಿ ಅನಿತಾ ಸಾರಾ ಮಹೇಶ್ ಅವರು ಉತ್ತರ ಕರ್ನಾಟಕದ ಖ್ಯಾತ ಹಾಸ್ಯ ಕಲಾವಿದ ಲಪಂಗ್ ರಾಜ್ ಅವರ ಜೊತೆಗೆ ಈ ಆಲ್ಬಮ್ ಹಾಡಿಗೆ ಗಾಯಕಿಯಾಗಿರುವುದು ವಿಶೇಷ.

ಈ ಹಾಡಿನಲ್ಲಿ ಲಪಂಗ್ ರಾಜ್ ಹಾಗೂ ಸ್ಟೆಫಿ ಲೂಯಿಸ್ ಅವರ ನೃತ್ಯ ಮನರಂಜನೆಯೊಂದಿಗೆ ಪ್ರೇಕ್ಷಕರನ್ನು ಕಣ್ಮನ ಸೆಳೆಯುತ್ತಿದೆ. ಸಂಪೂರ್ಣ ಹಾಡಿನ ಚಿತ್ರೀಕರಣ ವಿಜಯಪುರ ಜಿಲ್ಲೆಯ ಆಲಮಟ್ಟಿ ಸುತ್ತಮುತ್ತ ನಡೆದಿದ್ದು, ದೃಶ್ಯ ವೈಭವ ಹಾಡಿನ ಮೆರುಗನ್ನು ಹೆಚ್ಚಿಸಿದೆ.

ಈ ಆಲ್ಬಮ್‌ಗೆ ನೃತ್ಯ ಸಂಯೋಜನೆಯನ್ನು ಪವನ್ ಗೋಕಾಕ್ ಮಾಡಿದ್ದು, ಸಂಗೀತವನ್ನು ರವಿತೇಜ ಬಾಗಲಕೋಟೆ ನೀಡಿದ್ದಾರೆ. ಸಾಹಿತ್ಯವನ್ನು ಶಿವು ಅಂಬಿಗರ್ ರಚಿಸಿದ್ದು, ಕೋರಸ್‌ನಲ್ಲಿ ರವಿತೇಜ, ಅಶೋಕ ಕುಮಾರ ಬಡಿಗೇರ, ಶಾರದಾ ಪವಾರ್, ಭೀಮಶಿ ಚಿಕ್ಕೂರು ಮತ್ತು ಶಾರದಾ ಬಿದರಕಿಂಡಿ ಭಾಗವಹಿಸಿದ್ದಾರೆ.

ಹಾಡಿನ ಸಂಕಲನ ಕಾರ್ಯ ಮೈಸೂರು, ಗೋಕಾಕ್ ಮತ್ತು ಚೆನ್ನೈನಲ್ಲಿ ನಡೆದಿದ್ದು, ಪ್ರೊಡಕ್ಷನ್ ಎಕ್ಸಿಕ್ಯೂಟಿವ್ ಆಗಿ ಶಿವು ಚಾವಡಿ ಕಾರ್ಯನಿರ್ವಹಿಸಿದ್ದಾರೆ. ಪ್ರಚಾರ ವಿನ್ಯಾಸವನ್ನು ಎಚ್.ಬಿ. ಘಟಪ್ರಭಾ ಮಾಡಿದ್ದು, ಪತ್ರಿಕಾ ಸಂಪರ್ಕವನ್ನು ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ನೋಡಿಕೊಂಡಿದ್ದಾರೆ. ಆಸಕ್ತರು ಈ ಹಾಡನ್ನು ಸಾರಾ ಆಡಿಯೋ ಯೂಟ್ಯೂಬ್ ಚಾನಲ್ ನಲ್ಲಿ ವೀಕ್ಷಿಸಬಹುದು.

## ಶಿವಕುಮಾರ್ ಅವರ ಸಂಘಟನಾ ಚಾತುರ್ಯ ಯುವ ನಾಯಕರಿಗೆ ಮಾದರಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (KPCC) ಅಧ್ಯಕ್ಷರಾಗಿ 6 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ.

ಶಿವಕುಮಾರ್ ಅವರ ಸಂಘಟನಾ ಚಾತುರ್ಯ, ಸೈದ್ಧಾಂತಿಕ ಬದ್ಧತೆ ಹಾಗೂ ಕಠಿಣ ಪರಿಶ್ರಮ ಕಾಂಗ್ರೆಸ್ ಪಕ್ಷದ ಯುವ ನಾಯಕರಿಗೆ ಮಾದರಿಯಾಗಿದೆ ಎಂದು ಅವರು ಹೇಳಿದ್ದಾರೆ. ವಿರೋಧ ಪಕ್ಷವಾದ ಭಾರತೀಯ ಜನತಾ ಪಕ್ಷ ಸುಳ್ಳು ಪ್ರಕರಣಗಳನ್ನು ದಾಖಲಿಸಿ ಹಲವು ರೀತಿಯ ಕಿರುಕುಳ ನೀಡಿದರೂ ಶಿವಕುಮಾರ್ ಅವರು ಮಣಿಯದೆ ಪಕ್ಷಕ್ಕೆ ನಿಷ್ಠೆಯಿಂದ ನಿಂತಿರುವುದು ಕಾಂಗ್ರೆಸ್ ಪಕ್ಷದ ಬಗ್ಗೆ ಅವರಲ್ಲಿರುವ ರಾಜಿಯಿಲ್ಲದ ಬದ್ಧತೆಯನ್ನು ತೋರಿಸುತ್ತದೆ ಎಂದು ತಿಳಿಸಿದ್ದಾರೆ.

ಕೋಮುವಾದಿ ಶಕ್ತಿಗಳನ್ನು ಸೋಲಿಸಿ ಭಾರತೀಯ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಹೋರಾಟದಲ್ಲಿ ಪಕ್ಷದ ನಾಯಕರು ಮತ್ತು ಕಾರ್ಯಕರ್ತರೊಂದಿಗೆ ಡಿ.ಕೆ. ಶಿವಕುಮಾರ್ ಹಗಲಿರುಳು ದುಡಿದಿದ್ದಾರೆ. ರಾಜ್ಯವನ್ನು ಮತ್ತೆ ಸರ್ವಜನಾಂಗದ ಶಾಂತಿಯ ತೋಟವಾಗಿ ಕಟ್ಟುವ ಕಾರ್ಯದಲ್ಲಿ ಅವರು ತಮ್ಮ ಹೆಗಲಿಗೆ ಹೆಗಲು ನೀಡಿ ಕೆಲಸ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ತಮ್ಮಿಗಿಂತ ಕಿರಿಯರಾದ ಶಿವಕುಮಾರ್ ಅವರಿಗೆ ಉಜ್ವಲ ರಾಜಕೀಯ ಭವಿಷ್ಯವಿದೆ. 2028ರಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಬೇಕೆಂಬುದು ನಮ್ಮೆಲ್ಲರ ಬಯಕೆಯಾಗಿದ್ದು, ಅದರಿಗಾಗಿ ನಡೆಯುವ ಪಕ್ಷದ ಸಂಘಟನೆ ಮತ್ತು ಹೋರಾಟದಲ್ಲಿ ತಾವೂ ಕೂಡ ಜೊತೆಯಾಗಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

## ಮಾ. 13ರಂದು ನೇರ ಉದ್ಯೋಗ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ಉದ್ಯೋಗಾವಕಾಶಕ್ಕಾಗಿ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಮಾರ್ಚ್ 13, 2026 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ವಿವೇಕಾನಂದ ನಗರ, 4ನೇ ಅಡ್ಡ ರಸ್ತೆ, ಸಾಯಿ ಬಾಬಾ ದೇವಸ್ಥಾನ ಹಿಂಭಾಗದ ಕೆ.ಎಚ್.ಬಿ ಕಾಲೋನಿ, ಗದಗದಲ್ಲಿ ನೇರ ಸಂದರ್ಶನ ನಡೆಯಲಿದೆ.

ಈ ಸಂದರ್ಶನದಲ್ಲಿ ಸ್ವತಂತ್ರ ಮೈಕ್ರೋಪಿನ್ ಪ್ರೈವೇಟ್ ಲಿಮಿಟೆಡ್, ಗದಗ ಕಂಪನಿ ಭಾಗವಹಿಸಲಿದೆ. **ಹುದ್ದೆ:** ಎಸ್‌ಎಫ್‌ಒ (ಫೀಲ್ಡ್ ವರ್ಕ) **ವಿದ್ಯಾರ್ಹತೆ:** ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ, **ವಯಸ್ಸು:** 18 ರಿಂದ 30 ವರ್ಷ (ಪುರುಷ ಮತ್ತು ಮಹಿಳೆ)

**ಕೆಲಸದ ಸ್ಥಳ:** ಶಿರಹಟ್ಟಿ, ಮುಂಡರಗಿ, ಗದಗ, ಅಣ್ಣಿಗೇರಿ

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮ್ (ಬಯೋಡಾಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್‌ನ ಝೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ಸಂದರ್ಶನದಲ್ಲಿ ಭಾಗವಹಿಸುವವರಿಗೆ ನೋಂದಣಿ ಕಡ್ಡಾಯವಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 6363330688, 7022606050, 8951460061 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಯುದ್ಧದ ರಾಜಕೀಯದಿಂದ ವಿಶ್ವದಲ್ಲಿ ಆತಂಕದ ವಾತಾವರಣ

# ಅಮೆರಿಕಕ್ಕೆ ಇರಾನ್ ಹೆದರದು, ತೀವ್ರ ಪ್ರತಿರೋಧ ನೀಡಲಿದೆ!

ಮಧ್ಯಪ್ರಾಚ್ಯ ಪ್ರದೇಶದಲ್ಲಿ ನಡೆಯುತ್ತಿರುವ ಯುದ್ಧ ಸನ್ನಿವೇಶಗಳು ವಿಶ್ವದ ಗಮನ ಸೆಳೆಯುತ್ತಿವೆ. ಅಮೆರಿಕ ಹಾಗೂ ಅದರ ಮಿತ್ರ ರಾಷ್ಟ್ರಗಳು ಇರಾನ್ ಮೇಲೆ ನಡೆಸುತ್ತಿರುವ ದಾಳಿಗಳು ಜಾಗತಿಕ ರಾಜಕೀಯದಲ್ಲಿ ಉದ್ವಿಗ್ನತೆ ಹೆಚ್ಚಿಸುತ್ತಿವೆ.

ಅಮೆರಿಕದ ಯುದ್ಧ ನೀತಿಗಳು ಜಗತ್ತಿನ ಅನೇಕ ರಾಷ್ಟ್ರಗಳಲ್ಲಿ ಆತಂಕ ಹುಟ್ಟಿಸುತ್ತಿದ್ದು, ಇರಾನ್ ದೇಶ ಅಮೆರಿಕದ ಬೆದರಿಕೆಗೆ ಹೆದರದೇ ಪ್ರತಿರೋಧ ತೋರಿಸಲಿದೆ ಎಂಬುದು ಸ್ಪಷ್ಟವಾಗುತ್ತಿದೆ.

ಇತ್ತೀಚಿನ ದಿನಗಳಲ್ಲಿ ಕ್ಷಿಪಣಿ ದಾಳಿಗಳು ಹಾಗೂ ತೈಲ ಘಟಕಗಳ ಮೇಲೆ ನಡೆದ ದಾಳಿಗಳು ಮಧ್ಯಪ್ರಾಚ್ಯ ಪ್ರದೇಶದ ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸಿವೆ.






ಯುದ್ಧದ ಪರಿಣಾಮವಾಗಿ ಪರಿಸರ ಮತ್ತು ಮಾನವ ಜೀವನದ ಮೇಲೆ ಭಾರೀ ಪರಿಣಾಮ ಬೀರುತ್ತಿದೆ. ತೈಲ ಘಟಕಗಳಲ್ಲಿ ಉಂಟಾಗಿರುವ ಬೆಂಕಿ ಮತ್ತು ಕಪ್ಪು ಹೊಗೆ ವಾತಾವರಣವನ್ನು ದುಷ್ಪರಿಣಾಮಕ್ಕೆ ತಳ್ಳುತ್ತಿದೆ. ಇಂತಹ ಯುದ್ಧಗಳಿಂದ ಜಗತ್ತಿನ ಜನರಲ್ಲಿ ಭಯ ಮತ್ತು ಆತಂಕ ಹೆಚ್ಚುತ್ತಿದೆ.

ವಿಶ್ವ ವೇದಿಕೆಯಲ್ಲಿ ಶಕ್ತಿಶಾಲಿ ರಾಷ್ಟ್ರ ಎಂದು ತೋರಿಸಿಕೊಳ್ಳುವ ಸ್ಪರ್ಧೆಯಲ್ಲಿ ದೊಡ್ಡ ರಾಷ್ಟ್ರಗಳು ಯುದ್ಧದ ದಾರಿ ಹಿಡಿಯುತ್ತಿರುವುದು ಮಾನವಕುಲಕ್ಕೆ ಅಪಾಯಕಾರಿಯಾಗಿದೆ. ಯುದ್ಧದಿಂದ ನಾಶವೇ ಹೊರತು ಶಾಂತಿ ಸಿಗುವುದಿಲ್ಲ. ಸಮಸ್ಯೆಗಳನ್ನು ಮಾತುಕತೆಯ ಮೂಲಕ ಬಗೆಹರಿಸುವುದು ಜಗತ್ತಿಗೆ ಒಳಿತು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ರಾಜಕೀಯ ನಡೆಗಳು ಜಾಗತಿಕ ರಾಜಕೀಯದಲ್ಲಿ ದೊಡ್ಡ ಬದಲಾವಣೆಗಳಿಗೆ ಕಾರಣವಾಗಬಹುದು. ಮುಂದಿನ ದಿನಗಳಲ್ಲಿ ಜಗತ್ತಿನ ರಾಷ್ಟ್ರಗಳು ಶಾಂತಿಯ ದಾರಿ ಹಿಡಿದು ಸಮಸ್ಯೆಗಳನ್ನು ಬಗೆಹರಿಸಬೇಕು ಎಂಬುದು ಸಮಯದ ಅವಶ್ಯಕತೆ ಎಂದು ಹೇಳಿದರು.

– ಜೆ.ಕೆ.ಎಚ್. ಕಲಬುರ್ಗಿ
ಹಟ್ಟಿ ಚಿನ್ನದ ಗಣಿ

## ಹುತಾತ್ಮ ಸೈನಿಕರ ಅಂತ್ಯಕ್ರಿಯೆಯನ್ನು ಗೌರವದಿಂದ ಮಾಡಿ: ಶಿವಪುತ್ರಪ್ಪ ಸಂಗನಾಳ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿವೃತ್ತರಾದ ಯಾವುದೇ ಸೈನಿಕರು ಹುತಾತ್ಮರಾದ ಸಂದರ್ಭದಲ್ಲಿ ಅವರ ಅಂತ್ಯಕ್ರಿಯೆಯನ್ನು ಗೌರವದಿಂದ ಮಾಡಬೇಕು. ಅದಕ್ಕಾಗಿ ಮೃತರ ಕುಟುಂಬದವರು ಜಿಲ್ಲಾ ಸೈನಿಕ ಸಂಘಕ್ಕೆ ಮಾಹಿತಿ ನೀಡಿದರೆ ಅಥವಾ ಸಂಘಕ್ಕೆ ಮಾಹಿತಿ ನೀಡಿದರೆ ಸಶಸ್ತ್ರ ಪಡೆಗಳು ಅಥವಾ ಪೊಲೀಸರು ಬಂದು ಮೃತರಿಗೆ ಶ್ರದ್ಧಾಂಜಲಿ ಕೋರಿ ಗೌರವ ಸಮರ್ಪಣೆ ಮಾಡುತ್ತಾರೆ ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯಲ್ಲಿ ಮಾತನಾಡಿದ ಅವರು, ಮೃತರ ಕುಟುಂಬಕ್ಕೆ ಜಿಲ್ಲಾ ಸಂಘವು 10,000 ರೂ.ಗಳನ್ನು ನೀಡುತ್ತದೆ. ನಂತರ ಕುಟುಂಬದವರು ಕೆಳಗಿನ ದಾಖಲೆಗಳನ್ನು ಸಲ್ಲಿಸಿದರೆ ಅನೇಕ ಸೌಲಭ್ಯಗಳು ಮೃತರ ಕುಟುಂಬಕ್ಕೆ ದೊರಕುತ್ತವೆ ಎಂದು ಅವರು ತಿಳಿಸಿದರು.



ಮೃತ ಯೋಧನ ಗುರುತಿನ ಚೀಟಿ, ಡಿಸ್‌ಚಾರ್ಜ್ ಬುಕ್, ಮೃತನ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಕುಟುಂಬದ ಬ್ಯಾಂಕ್ ಪಾಸ್‌ಬುಕ್‌ಗಳ ದಾಖಲೆಗಳನ್ನು ನೀಡಬೇಕು.

"ನಿಮ್ಮ ಕುಟುಂಬದಲ್ಲಿ ಏನೇ ತೊಂದರೆ ಇದ್ದರೂ ಅದನ್ನು ನಮ್ಮೊಂದಿಗೆ ಹಂಚಿಕೊಳ್ಳಿ. ನಿಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘವಿರುವುದು. ಯಾವುದನ್ನೂ ಮನಸ್ಸಿನಲ್ಲಿ ಹಚ್ಚಿಕೊಳ್ಳದೆ ನಿಶ್ಚಿಂತೆಯಿಂದ ಇರಲು ಪ್ರಯತ್ನಿಸಿರಿ" ಎಂದು ಸಂಗನಾಳ ಹೇಳಿದರು.

ಸಭೆಯಲ್ಲಿ ಸೋಮಪ್ಪ ಶಿವಾಪೂರ, ಕುಮಾರಸ್ವಾಮಿ ಕೋರಧಾನ್ಯಮಠ, ರಾಮಪ್ಪ ರೋಣದ, ಸಂಗಪ್ಪ ಕುಷ್ಟಗಿ, ಪ್ರಭುದೇವ ಮುಕ್ಕನಗೌಡ್ರ, ಸಿದ್ರಾಮಪ್ಪ ಕಟ್ಟಿಮನಿ, ಈರಪ್ಪ ದೊಡ್ಡಣ್ಣವರ, ಸಮಿತ್ರಾ ದಳವಾಯಿ, ಗುರುಶಾಂತಗೌಡ ಮಲ್ಲನಗೌಡ್ರ, ಮಲ್ಲಮ್ಮ ಬೈರಗೊಂಡ, ವೀರಪ್ಪ ತೊಂಡಿಹಾಳ, ಉಮೇಶ ಕರಮುಡಿ, ಬಸವೇಶ್ವರ ಚಿಕ್ಕೊಪ್ಪದ, ದಾದಾಸಾಬ ನದಾಫ್, ದಾವಲಸಾಬ ಕಿಲ್ಲೇದಾರ, ಮಲ್ಲಪ್ಪ ಕಡೆತೋಟದ ಮತ್ತಿತರರು ಉಪಸ್ಥಿತರಿದ್ದರು.

## ಅಂಗನವಾಡಿ ಕೇಂದ್ರದಲ್ಲಿ ಎಲ್.ಕೆ.ಜಿ-ಯು.ಕೆ.ಜಿ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ನರಗುಂದ

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ನರಗುಂದ ಇವರ ವತಿಯಿಂದ ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳನ್ನಾಗಿ ಆಯ್ಕೆ ಮಾಡಿದ್ದು ಅದರಡಿಯಲ್ಲಿ ತಾಲೂಕಿನ ಬೆನಕನಕೊಪ್ಪ-46 ನೇ ಅಂಗನವಾಡಿ ಕೇಂದ್ರದಲ್ಲಿ ಎಲ್.ಕೆ.ಜಿ /ಯು,ಕೆ.ಜಿ ಪ್ರಾರಂಭೋತ್ಸವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ಸರಸ್ವತಿ ಪೂಜೆ ಹಾಗೂ ಜ್ಯೋತಿ ಬೆಳಗಿಸುವ ಮೂಲಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ವೆಂಕಪ್ಪ ಗಿರಿತಿಮ್ಮಣ್ಣವರ ಉದ್ಘಾಟಿಸಿದರು.



ಭಾರತಿ ಕಾಲಚೆಟ್ಟಿ ಮಾತನಾಡಿ ಅಂಗನವಾಡಿ ಕೇಂದ್ರಗಳಲ್ಲಿ ಎಲ್.ಕೆ.ಜಿ/ ಯು,ಕೆ.ಜಿ ಆರಂಭದಿಂದ ಪೋಷಕರಿಗೆ ಶುಲ್ಕದ ಹೊರೆ ತಗ್ಗುವ ಜೊತೆಗೆ ಅಂಗನವಾಡಿ ಬಲವರ್ದನೆಗೆ ಪೂರಕವಾಗಿದೆ ಎಂದು ತಿಳಿಸಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ವೆಂಕಪ್ಪ ಗಿರಿತಿಮ್ಮಣ್ಣವರ ಮಾತನಾಡಿ "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮುಖೇನ ಎಲ್.ಕೆ.ಜಿ /ಯು,ಕೆ.ಜಿ ಆರಂಭದಿಂದ ಮಕ್ಕಳಿಗೆ ಸಮಯ ಪಾಲನೆ,ಶಿಸ್ತು,ಶಾಲಾ ಪೂರ್ವ ಶಿಕ್ಷಣ ಪಾಠ ದೊರೆಯುವಂತಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಜರುಗಿತು, ಮಕ್ಕಳಿಗೆ ಸಮವಸ್ತ್ರ ಹಾಗೂ ಪುಸ್ತಕ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ರುದ್ರಪ್ಪ ಗಾಣಿಗೇರ, ಮಂಜುನಾಥ ಗುಗ್ಗರಿ, ಆರೋಗ್ಯ ಇಲಾಖೆಯ ಅಕ್ಕಮಹಾದೇವಿ ಸಂಕನಗೌಡ್ರ, ಪೂಜಾ ನಸಳಿ,ಊರಿನ ಗ್ರಾಮಸ್ಥರು, ಅಂಗನವಾಡಿ ಕಾರ್ಯಕರ್ತೆ,ಸಹಾಯಕಿಯರು ಭಾಗವಹಿಸಿದ್ದರು.

### ಹಗರಿಬೊಮ್ಮನಹಳ್ಳಿಯಲ್ಲಿ ಪವರ್ ಮ್ಯಾನ್ ದಿನಾಚರಣೆ-ಸೇವೆಗೈದ ಸಿಬ್ಬಂದಿಗೆ ಸನ್ಮಾನ

## ವಿದ್ಯುತ್ ಪೂರೈಕೆಗೆ ಶ್ರಮಿಸುವ ಪವರ್ ಮ್ಯಾನ್‌ಗಳ ಸೇವೆ ಸ್ಮರಣೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಗುರುಭವನದಲ್ಲಿ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (GESCOM) ಭಾಗ ಕಚೇರಿಯ ನೌಕರರಿಂದ ಪವರ್ ಮ್ಯಾನ್ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಎಇಇ ಸತೀಶ್, ವಿದ್ಯುತ್ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಪವರ್ ಮ್ಯಾನ್‌ಗಳ ಪರಿಶ್ರಮ ಮತ್ತು ಸಮರ್ಪಣೆಯನ್ನು ಸ್ಮರಿಸಿದರು.

ದಿನರಾತ್ರಿ ಜನತೆಗೆ ನಿರಂತರ ವಿದ್ಯುತ್ ಪೂರೈಕೆ ಮಾಡಲು ಶ್ರಮಿಸುವ ಪವರ್ ಮ್ಯಾನ್‌ಗಳ ಸೇವೆ ಅತ್ಯಂತ ಮಹತ್ವದ್ದಾಗಿದ್ದು, ಅವರ ಪರಿಶ್ರಮವನ್ನು ಎಲ್ಲರೂ ಕೊಂಡಾಡಬೇಕು ಎಂದು ಹೇಳಿದರು.

ಮುಖ್ಯ ಅಭಿಯಂತರರಾದ ಮೌನೇಶ್ ಪತ್ತಾರ ಹಾಗೂ ಬಳ್ಳಾರಿಯ ಮುಖ್ಯ ಇಂಜಿನಿಯರ್ ತೇಜಾ ನಾಯ್ಕ ಮಾತನಾಡಿ, ವಿದ್ಯುತ್ ಪೂರೈಕೆ ವ್ಯವಸ್ಥೆಯನ್ನು ಸುಧಾರಿಸಲು ನೌಕರರು ಮಾಡುವ ಸೇವೆ ಮಹತ್ವದ್ದಾಗಿದೆ ಎಂದು ತಿಳಿಸಿದರು. ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಮಾತನಾಡಿ, ಪವರ್ ಮ್ಯಾನ್‌ಗಳ ಸೇವೆ ಸಮಾಜಕ್ಕೆ ಅನನ್ಯವಾಗಿದ್ದು, ಅವರ ಪರಿಶ್ರಮವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.



ಪವರ್ ಮ್ಯಾನ್ ದಿನಾಚರಣೆ ಸಂದರ್ಭದಲ್ಲಿ ವಿದ್ಯುತ್ ಪೂರೈಕೆಗೆ ದಿನರಾತ್ರಿ ಶ್ರಮಿಸುವ ಸಿಬ್ಬಂದಿಯ ಸೇವೆಯನ್ನು ಸ್ಮರಿಸಿ, ಅವರ ಕಾರ್ಯಕ್ಕೆ ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಭಾಗಗಳಿಂದ ಆಗಮಿಸಿದ ಅಧಿಕಾರಿಗಳು ಹಾಗೂ ನೌಕರರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಗುರು ಬಸವರಾಜ್, ರೈತ ಮುಖಂಡರಾದ ರವಿಕುಮಾರ ತಂಬ್ರಹಳ್ಳಿ, ಅಕ್ಕಿವರದ ನಾಗಪ್ಪ, ಹನಸಿ ದೇವರಾಜ್, ಸೇವಾ ನಾಯ್ಕ, ಅಪರ್ಣ ಎಒ, ರಾಘವೇಂದ್ರ ಎಇಇ, ಕೆ. ನಾಗರಾಜ್ ಎಇಇ, ಕೇದಾರನಾಥ್ ಎಇಇ (ಕೊಟ್ಟೂರು), ಪ್ರಶಾಂತ್ ಎಇಇ (ಕೂಡ್ಲಿಗಿ), ರಾಮಕೃಷ್ಣ (ಬಳ್ಳಾರಿ), ಹೆಚ್. ಹೊನ್ನೂರಪ್ಪ ಸಿಇಸಿ, ಜೆ. ಮಂಜುನಾಥ್, ಟಿ. ಕೃಷ್ಣಪ್ಪ ಸೇರಿದಂತೆ ಸ್ಥಳೀಯರು ಹಾಗೂ ಜೆಸ್ಕಾಂ ಸಿಬ್ಬಂದಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸಿರುವ ಪವರ್ ಮ್ಯಾನ್‌ಗಳನ್ನು ಸನ್ಮಾನಿಸಲಾಯಿತು.

## ದುಗ್ಗಿ ಸುಕ್ಷೇತ್ರದಲ್ಲಿ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಸೊರಬ

ಸೊರಬ ತಾಲ್ಲೂಕಿನ ಸುಕ್ಷೇತ್ರ ದುಗ್ಗಿ ಶ್ರೀಮದ್ ರಂಭಾಪುರಿ ಶಾಖಾ ಶ್ರೀ ಗುರು ರೇವಣಸಿದ್ಧೇಶ್ವರ ಮಠದಲ್ಲಿ ಮಾರ್ಚ್ 17ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ರಥೋತ್ಸವ ಮತ್ತು ಶ್ರೀ ಮಠದ 51ನೇ ವಾರ್ಷಿಕೋತ್ಸವ ನಡೆಯಲಿದೆ. ಇದರಲ್ಲಿ ಶ್ರೀ ಮಠದ ಸಂಸ್ಥಾಪಕರಾದ ಲಿಂ. ಮುರುಘೇಂದ್ರ ಸ್ವಾಮಿಗಳ 7ನೇ ವರ್ಷದ ಪುಣ್ಯ ಸ್ಮರಣೆ ಮತ್ತು ಪ್ರಸ್ತುತ ರೇವಣಸಿದ್ಧೇಶ್ವರ ಶಿವಾಚಾರ್ಯರ ದ್ವಾದಶ ಪಟ್ಟಾಧಿಕಾರ ವರ್ಧಂತಿ ವರ್ಷಾಚರಣೆ ನಡೆಯಲಿದೆ.

ದುಗ್ಗಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳ ಪ್ರಕಟಣೆಯಲ್ಲಿ, ವಿವಿಧ ಕ್ಷೇತ್ರಗಳ ಸಾಧಕರಿಗೆ ಶ್ರೀ ಗುರು ರೇವಣಸಿದ್ಧೇಶ್ವರ ಸದ್ಭಾವನಾ ಸಿರಿ ಪ್ರಶಸ್ತಿ ಪ್ರದಾನ ಸಮಾರಂಭವೂ ಜರುಗಲಿದೆ ಎಂದು ತಿಳಿಸಿದ್ದಾರೆ.

ಮಾರ್ಚ್ 17, ಮಂಗಳವಾರ ಸಂಜೆ 5.30ಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಶ್ರೀ ಕ್ಷೇತ್ರದ ಜಾತ್ರಾ ಮಹೋತ್ಸವ ಹಾಗೂ ಲಿಂ. ಪೂಜ್ಯರ ಪುಣ್ಯ ಸ್ಮರಣೆ ಧರ್ಮ ಸಮಾರಂಭ ಜರುಗಲಿದೆ. ಸದುಪ್ಪಮನೆ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ಅಧ್ಯಕ್ಷತೆ ವಹಿಸುವರು. ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಮಾಜಿ ಸಚಿವ ಹರತಾಳು ಹಾಲಪ್ಪ ಲಿಂ.ಶ್ರೀಗಳ ಭಾವಚಿತ್ರ ಬಿಡುಗಡೆ ಮಾಡಲಿದ್ದಾರೆ.

ರೇವಣಸಿದ್ಧೇಶ್ವರ ಶ್ರೀಗಳ ದ್ವಾದಶ ಪಟ್ಟಾಧಿಕಾರ ವರ್ಧಂತಿ ವರ್ಷಾಚರಣೆಯ ಸಂದರ್ಭದಲ್ಲಿ ವಿವಿಧ ಸಾಧಕರಿಗೆ ಪ್ರಶಸ್ತಿ ನೀಡಲಾಗುವುದು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ವಿ.ಎಸ್. ಪಾಟೀಲ್, ಗಣಪತಿ ಹುಲ್ತಿಕೊಪ್ಪ, ಗುರುಕುಮಾರ ಪಾಟೀಲ ಅಂದವಳ್ಳಿ, ಪ್ರಕಾಶ ಅಗಸನಹಳ್ಳಿ, ಸುರೇಶ ಎನ್., ಹೆಚ್. ಮಲ್ಲಿಕಾರ್ಜುನಪ್ಪ, ಮಲ್ಲಮ್ಮ ಕಬ್ಬೂರು, ಬಾಲರಾಜ ನಾಗರಾಳ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ದುಗ್ಗಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಕ್ಷೇತ್ರದ ಎಲ್ಲ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಸೂಚಿಸಿದ್ದಾರೆ.

### ಕೇಳಿದ 19+1 ಬಸ್ ಬದಲು 28+1 ಸೀಟಿನ ಬಸ್ ನೀಡಿದ ಪ್ರಕರಣ ಗ್ರಾಹಕರಿಗೆ ಪರಿಹಾರ ನೀಡಲು ಧಾರವಾಡ ಗ್ರಾಹಕರ ಆಯೋಗ ಆದೇಶ

## ಗ್ರಾಹಕನಿಗೆ ಅನ್ಯ ಬಸ್ ವಿತರಿಸಿದ ಅಶೋಕ ಲೇ ಲ್ಯಾಂಡ್ ಕಂಪನಿಗೆ ದಂಡ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ತಾವು ಕೇಳಿದ ಬಸ್ ಬದಲಾಗಿ ಹೆಚ್ಚುವರಿ ಸೀಟ್‌ನ ಬಸ್ ನೀಡಿದ್ದಕ್ಕಾಗಿ ವ್ಯಕ್ತಿಯೊಬ್ಬರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮೆಟ್ಟಿಲೇರಿದ್ದಾರೆ.

ಅಂಕೋಲಾ ತಾಲೂಕಿನ ಬಾವಿಕೇರಿ ನಿವಾಸಿ ಸುಭಾಷ ನಾಯಕ ಅವರು ಹುಬ್ಬಳ್ಳಿಯ ರಾಯಾಪುರದ ಚನ್ನಮ್ಮ ಅಟೋಮೋಟಿವ್ಸ್ ಮೂಲಕ ಅಶೋಕ ಲೇ ಲ್ಯಾಂಡ್ ಕಂಪನಿಯ 19+1 ಸೀಟಿನ ರೂ. 25,76,730 ಮೌಲ್ಯದ ಮಿತ್ರಾ ಬಸ್ ಖರೀದಿಸಿದ್ದರು. ಇದಕ್ಕಾಗಿ ಅಂಕೋಲಾ ರೂರಲ್ಸ್ ಬ್ಯಾಂಕ್‌ನಿಂದ ರೂ.25 ಲಕ್ಷ ಸಾಲ ಪಡೆದಿದ್ದರು.

ಹೊಸದಾಗಿ ಖರೀದಿಸಿದ ವಾಹನವನ್ನು ಆರ್‌ಟಿಓನಲ್ಲಿ ನೋಂದಣಿ ಮಾಡುವ ವೇಳೆ ತಾವು ಕೇಳಿದ 19+1 ಬಸ್ ಬದಲಾಗಿ 28+1 ಸೀಟಿನ ಬಸ್ ನೀಡಿರುವುದು ತಿಳಿದು ಬಂದಿದೆ. ಈ ಬಗ್ಗೆ ದೂರುದಾರರು ಹಲವಾರು ಬಾರಿ ಸರಿಪಡಿಸಲು ಮನವಿ ಮಾಡಿದರೂ, ಮಾರಾಟ ಸಂಸ್ಥೆ ಬಸ್ ಬದಲಾಯಿಸಲು ನಿರಾಕರಿಸಿತ್ತು.

ಈ ಹಿನ್ನೆಲೆಯಲ್ಲಿ ಸುಭಾಷ ನಾಯಕ ಅವರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಅ. ಬೋಳಶೆಟ್ಟಿ ಪ್ರಕರಣವನ್ನು ಪರಿಶೀಲಿಸಿ ಈ ಮಹತ್ವದ ಆದೇಶ ನೀಡಿದ್ದಾರೆ.

### ಒಂದು ತಿಂಗಳೊಳಗೆ ಬಸ್ ನೀಡಲು ಆದೇಶ

ದೂರುದಾರರು ಕೇಳಿದಂತೆ 19+1 ಸೀಟಿನ 3100 ಎಂಎಂ ಡಬ್ಲ್ಯು ಬಸ್ ಅನ್ನು ಒಂದು ತಿಂಗಳೊಳಗೆ ನೀಡಬೇಕು ಎಂದು ಆಯೋಗ ಸೂಚಿಸಿದೆ.

ನಿಗದಿತ ಅವಧಿಯಲ್ಲಿ ಬಸ್ ನೀಡದಿದ್ದರೆ ರೂ. 25,76,730 ಮೊತ್ತವನ್ನು ಶೇ.8ರ ಬಡ್ಡಿಯೊಂದಿಗೆ ಪಾವತಿಸಬೇಕು ಎಂದು ಆದೇಶಿಸಲಾಗಿದೆ.

ಜೊತೆಗೆ ದೂರುದಾರರಿಗೆ ಉಂಟಾದ ಅನಾನುಕೂಲತೆಗೆ ರೂ.50,000 ಪರಿಹಾರ ಹಾಗೂ ರೂ.10,000 ಕೋರ್ಟ್ ವೆಚ್ಚ ಪಾವತಿಸಲು ಆಯೋಗ ಸೂಚಿಸಿದೆ.

## ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿ: ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿಗೆ ಗದಗ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ತರಬೇತಿ 02 ಮೇ 2026 ರಿಂದ 28 ಫೆಬ್ರವರಿ 2027ರವರೆಗೆ ನಡೆಯಲಿದೆ. ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನಿಷ್ಠ ಎಸ್‌ಎಸ್‌ಎಲ್‌ಸಿ (SSLC) ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳ ತಂದೆ, ತಾಯಿ ಅಥವಾ ಪೋಷಕರು ಕಡ್ಡಾಯವಾಗಿ ಕೃಷಿ ಜಮೀನು ಹೊಂದಿರಬೇಕು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ (SC/ST) ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 33 ವರ್ಷ ವಯೋಮಿತಿ ನಿಗದಿಪಡಿಸಲಾಗಿದೆ. ಇತರೆ ವರ್ಗದ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 30 ವರ್ಷ ವಯೋಮಿತಿ ಇರುತ್ತದೆ.

ಸಾಮಾನ್ಯ ಅಭ್ಯರ್ಥಿಗಳಿಗೆ ರೂ.30 ಹಾಗೂ ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ರೂ.15 ಅರ್ಜಿ ಶುಲ್ಕ ನಿಗದಿಪಡಿಸಲಾಗಿದೆ. ಅಭ್ಯರ್ಥಿಗಳು ಆಯಾ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ (ಜಿಲ್ಲಾ ಪಂಚಾಯತ್) ಹೆಸರಿನಲ್ಲಿ ಪೋಸ್ಟಲ್ ಆರ್ಡರ್ (IPO) ಅಥವಾ ಡಿಮ್ಯಾಂಡ್ ಡ್ರಾಫ್ಟ್ (DD) ಮೂಲಕ ಶುಲ್ಕ ಪಾವತಿಸಬೇಕು.

ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ https://horticulturedir.karnataka.gov.in ಮೂಲಕ ಅಥವಾ ಹತ್ತಿರದ ತೋಟಗಾರಿಕೆ ಕಚೇರಿಯಲ್ಲಿ ಪಡೆಯಬಹುದು.

ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ ಏಪ್ರಿಲ್ 15 ಸಂಜೆ 5:30 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಅಥವಾ ತಾಲೂಕು ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಹೆಚ್‌ಪಿವಿ ಲಸಿಕಾಕರಣ ಅಭಿಯಾನ ಕುರಿತು ಪೂರ್ವಭಾವಿ ಸಭೆಯಲ್ಲಿ ಡಿಸಿ ಶ್ರೀಧರ್ ಸೂಚನೆ

# 14–15 ವರ್ಷದ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಯಾವುದೇ ಹೆಣ್ಣು ಮಕ್ಕಳು ಹೆಚ್‌ಪಿವಿ ಲಸಿಕೆಯಿಂದ ವಂಚಿತರಾಗಬಾರದು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ನಡೆದ ಊಕಗಿ (ಹ್ಯೂಮನ್ ಪ್ಯಾಪಿಲೋಮವೈರಸ್) ಲಸಿಕಾಕರಣ ಅಭಿಯಾನದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಸಿಕಾಕರಣ ಅಭಿಯಾನವನ್ನು ಯಶಸ್ವಿಗೊಳಿಸಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಗ್ರಾಮಮಟ್ಟದಲ್ಲಿ ಜಾಗೃತಿ ಮೂಡಿಸಿ, ಸೂಕ್ತ ಕ್ರಿಯಾ ಯೋಜನೆ ರೂಪಿಸಬೇಕು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಹೇಳಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್. ಮಾತನಾಡಿ, ಜಿಲ್ಲೆಯಲ್ಲಿ ಊಕಗಿ ಲಸಿಕಾಕರಣ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, 14 ರಿಂದ 15 ವರ್ಷದ ಎಲ್ಲಾ ಹೆಣ್ಣುಮಕ್ಕಳಿಗೆ ಈ ಲಸಿಕೆಯನ್ನು ನೀಡಲಾಗುತ್ತದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿನ ಈ



ವಯೋಮಾನದ ಒಟ್ಟು 11,415 ಫಲಾನುಭವಿಗಳಿಗೆ ಲಸಿಕೆ ನೀಡುವ ಗುರಿ ಇಟ್ಟುಕೊಳ್ಳಲಾಗಿದೆ ಎಂದರು.

ಈ ಲಸಿಕೆಯಿಂದ ಗರ್ಭಕಂಠದ ಕ್ಯಾನ್ಸರ್ ವಿರುದ್ಧ ರಕ್ಷಣೆಯನ್ನು ಪಡೆಯಬಹುದು. ಶಾಲೆಗಳಲ್ಲಿ ಪಾಲಕರ ಸಭೆಗಳನ್ನು ನಡೆಸಿ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿಕೊಳ್ಳುವಂತೆ ಮನವರಿಕೆ ಮಾಡಬೇಕು. ಲಸಿಕೆಯ ಲಾಭಗಳು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್‌ಪಿವಿ ಲಸಿಕಾಕರಣ ಅಭಿಯಾನದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

> "ಜಿಲ್ಲೆಯ ಯಾವುದೇ ಹೆಣ್ಣುಮಕ್ಕಳು ಹೆಚ್‌ಪಿವಿ ಲಸಿಕೆಯಿಂದ ವಂಚಿತರಾಗಬಾರದು. ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಸಮನ್ವಯದಿಂದ ಕೆಲಸ ಮಾಡಿ ಲಸಿಕಾಕರಣ ಅಭಿಯಾನವನ್ನು ಯಶಸ್ವಿಗೊಳಿಸಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ತಾಲೂಕು ಆರೋಗ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಸ್ವಾಗತಿಸಿದರು.

**ಹೆಚ್‌ಪಿವಿ ಲಸಿಕಾಕರಣ ಅಭಿಯಾನ ಪ್ರಮುಖ ಅಂಶಗಳು**

1. ಗುರಿ ವಯಸ್ಸು : 14 ರಿಂದ 15 ವರ್ಷದ ಹೆಣ್ಣುಮಕ್ಕಳು
2. ಗದಗ ಜಿಲ್ಲೆಯಲ್ಲಿ ಒಟ್ಟು ಫಲಾನುಭವಿಗಳು : 11,415
3. ಲಸಿಕೆಯ ಉದ್ದೇಶ : ಗರ್ಭಕಂಠದ ಕ್ಯಾನ್ಸರ್‌ನಿಂದ ರಕ್ಷಣೆ
4. ಶಾಲೆಗಳಲ್ಲಿ ಪಾಲಕರ ಸಭೆ ನಡೆಸಿ ಜಾಗೃತಿ ಮೂಡಿಕೆ
5. ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸಹಕಾರದಲ್ಲಿ ಅಭಿಯಾನ ನಡೆಸಲಾಗುತ್ತದೆ.

## ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸಿ: ಕುಲಕರ್ಣಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಕ್ಕಳಲ್ಲಿ ಯಾವುದಾದರೂ ಒಂದು ಕಲೆ ಅಡಗಿರುತ್ತದೆ. ಅದನ್ನು ಹೊರತೆಗೆಯಲು ಶಾಲಾ ವಾರ್ಷಿಕೋತ್ಸವಗಳು ಉತ್ತಮ ವೇದಿಕೆಯಾಗಿವೆ. ಪಾಲಕರು ತಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸುವುದರ ಜೊತೆಗೆ ಸಾಂಸ್ಕೃತಿಕ ರಾಯಭಾರಿಗಳನ್ನಾಗಿಯೂ ಬೆಳೆಸಬೇಕು ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಕೋಡಿಕೊಪ್ಪದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಚಲನಚಿತ್ರದ ಹಾಡುಗಳಿಗೆ ನೃತ್ಯ ಮಾಡುವುದು ಕಲೆ ಬೆಳೆಯಲು ಸಹಾಯಕವಾಗುವುದಿಲ್ಲ. ಬದಲಿಗೆ ಮಕ್ಕಳಿಗೆ ಶಾಸ್ತ್ರೀಯ ನೃತ್ಯ ಕಲಿಸಿ, ಭಾರತೀಯ ಸಂಗೀತ



ವಾದ್ಯಗಳನ್ನು ಬಳಸಿ ಸಾಂಸ್ಕೃತಿಕ ಕಲೆಯನ್ನು ಪರಿಚಯಿಸಿದರೆ ಅವರಲ್ಲಿ ಕಲಾತ್ಮಕತೆ ಮತ್ತಷ್ಟು ಗಟ್ಟಿಯಾಗುತ್ತದೆ. ಈ ದಿಕ್ಕಿನಲ್ಲಿ ಪಾಲಕರು, ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆ ಯೋಚನೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಜೊತೆಗೆ ನಮ್ಮ ಹಿಂದಿನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ನಿಂಗಪ್ಪ ಹೊನ್ನಾಪೂರ, ಕೋಡಿಕೊಪ್ಪದಲ್ಲಿ ಶಾಲೆ ಸ್ಥಾಪನೆಗೆ ಕಾರಣರಾದ ಮಹನೀಯರನ್ನು ಸ್ಮರಿಸಿದರು. ಅದರಲ್ಲೂ ಹಿರಿಯರಾದ ಬಸಪ್ಪ ನಾಶಿಪುಡಿ ಅವರ ಶ್ರಮವನ್ನು ಅವರು ವಿಶೇಷವಾಗಿ ಪ್ರಸ್ತಾಪಿಸಿದರು. ಈ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿದ ಹಲವರು ಇಂದು ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ, ಪತ್ರಕರ್ತ ಮಲ್ಲಯ್ಯ ಗುಂಡಗೋಪುರಮಠ ಉಪಸ್ಥಿತರಿದ್ದರು.

## ರಮಜಾನ್: 200ಕ್ಕೂ ಹೆಚ್ಚು ಆಹಾರ ಕಿಟ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪವಿತ್ರ ರಮಜಾನ್ ಮಾಸದ ಅಂಗವಾಗಿ ಗದಗ ನಗರದ ಇರಾನಿ ಕಾಲೋನಿಯಲ್ಲಿ 200ಕ್ಕೂ ಹೆಚ್ಚು ಕುಟುಂಬಗಳಿಗೆ ಆಹಾರ ಕಿಟ್‌ಗಳನ್ನು ವಿತರಿಸುವ ಮಾನವೀಯ ಸೇವಾ ಕಾರ್ಯ ನಡೆಯಿತು. ಖೋಜಾ ಜಮಾತ್ ಬೆಂಗಳೂರು ಮತ್ತು ಕೆಎಸ್‌ಐಜೆ ಗದಗ ಅವರ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಉಪವಾಸದ ತಿಂಗಳಲ್ಲಿ ಅಗತ್ಯವಿರುವ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಆಹಾರ ಸಾಮಗ್ರಿಗಳನ್ನು ಹಂಚಲಾಯಿತು.

ರಮಜಾನ್ ಮಾಸವು ಆತ್ಮಪರಿಶೀಲನೆ, ಕ್ಷಮೆ ಕೋರುವುದು ಹಾಗೂ ಪರಸ್ಪರ ಸಹಾನುಭೂತಿ ಮತ್ತು




ಕರುಣೆಯನ್ನು ವ್ಯಕ್ತಪಡಿಸುವ ಪವಿತ್ರ ಕಾಲವಾಗಿದೆ. ಈ ಸಂದೇಶವನ್ನು ಮನದಟ್ಟು ಮಾಡಿಕೊಂಡು ಸಮಾಜದಲ್ಲಿ ಸಹಕಾರ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸುವ ಉದ್ದೇಶದಿಂದ ಈ ಸೇವಾ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಕೆಎಸ್‌ಐಜೆ ಬೆಂಗಳೂರು ಅಧ್ಯಕ್ಷ ಅಶ್ರಫ್ ಅಬ್ಬಾಸ್ ಬದಾಮಿ, ಉಪಾಧ್ಯಕ್ಷ ಶಬ್ಬೀರ್ ನಾಸಿರ್, ಕಾರ್ಯದರ್ಶಿ ಅಸ್ಫಾಕ್ ಮೆಸ್ತ್ರಿ ಅವರ ನೇತೃತ್ವದಲ್ಲಿ ಸಮನ್ವಯಗೊಳಿಸಲಾಯಿತು.

ಈ ಸಂದರ್ಭದಲ್ಲಿ ಡಾ. ಪ್ಯಾರಅಲಿ ನೂರಾನಿ, ಎಂಜಿನಿಯರ್ ಮೊಹಮ್ಮದ್ ಸಿಯಾನಿ, ಮೊಹಮ್ಮದ್ ರೆಜಾ ಭಾವನಗರಿ, ಆರ್ಕಿಟೆಕ್ಟ್ ಜೀಶಾನ್, ಜಾಫರ್ ಕಾಜಿ ಹಾಗೂ ಚೇರ್ಮನ್ ಅಕ್ಬರ್ ಭಾಯಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬಾಲ್ಯ ವಿವಾಹ ತಡೆಗೆ ವಿನೂತನ ಜಾಗೃತಿ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಲ್ಯ ವಿವಾಹವನ್ನು ತಡೆಯಲು ಗದಗ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಹೊಸ ಮತ್ತು ಸೃಜನಾತ್ಮಕ ಜಾಗೃತಿ ಅಭಿಯಾನವನ್ನು ಆರಂಭಿಸಿದೆ. 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣುಮಕ್ಕಳು ಮತ್ತು 21 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕರು ಮದುವೆ ಮಾಡಿಕೊಳ್ಳುವುದನ್ನು ಕಾನೂನು ಬದ್ಧವಾಗಿ ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಆದರೆ ಗದಗ ಜಿಲ್ಲೆ ಕರ್ನಾಟಕದಲ್ಲಿ ಬಾಲ್ಯವಿವಾಹದ ಪ್ರಮಾಣದಲ್ಲಿ ಆರನೇ ಸ್ಥಾನದಲ್ಲಿದ್ದು, ಸಾರ್ವಜನಿಕರಲ್ಲಿ ತಕ್ಷಣದ ಜಾಗೃತಿ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಉಪನಿರ್ದೇಶಕ ಡಾ. ನಂದಾ ಹಣಬರಟ್ಟಿ ಅವರ ನೇತೃತ್ವದಲ್ಲಿ, ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕರ ವಸತಿ ನಿಲಯಗಳಲ್ಲಿ, ಶಾಲಾ ಮಕ್ಕಳಿಗೆ ಮತ್ತು ಸಾರ್ವಜನಿಕರಿಗೆ ಕಾರ್ಟೂನ್ ಚಿತ್ರಗಳ ಮೂಲಕ ಬಾಲ್ಯವಿವಾಹ ವಿರೋಧಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಅಭಿಯಾನದ ಮೂಲಕ, "ನಸುನಗುತ ಕುಣಿಯುವ ವಯಸ್ಸಿನಲ್ಲಿ ಶಾಲೆಯಲ್ಲಿ ಕಲಿಯುವ ಸಂದರ್ಭದಲ್ಲಿಯೇ ಮದುವೆಯ ಸರಪಳಿಯಲ್ಲಿ ಮುಳುಗಿಸುವುದನ್ನು ತಡೆಹಿಡಿಯಬೇಕು" ಎಂಬ ಸಂದೇಶ ನೀಡಲಾಗುತ್ತದೆ. ವಸತಿ ನಿಲಯಗಳಲ್ಲಿ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಕಾರ್ಟೂನ್ ಮಾಧ್ಯಮದಲ್ಲಿ ನೀಡಲಾಗುವ ಶಿಕ್ಷಣವು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಉತ್ತಮ ಪರಿಣಾಮ ಬೀರುತ್ತದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

## ಸರ್ಕಾರಿ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಕಡಲೆ ಖರೀದಿ ಕೇಂದ್ರ ಆರಂಭ

■ವಿಜಯಸಾಕ್ಷಿ ಸುದ್ದಿ, ಮುಳಗುದ

ಪಟ್ಟಣದ ಸಮೀಪದ ಕುರ್ತಕೋಟಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಹೊಸ ಕಡಲೆ ಖರೀದಿ ಕೇಂದ್ರಕ್ಕೆ ಸಂಘದ ಅಧ್ಯಕ್ಷ ಮಲ್ಲಪ್ಪ ಹೊಸಮನಿ ಚಾಲನೆ ನೀಡಿದರು.

ಗ್ರಾಮ ಪಂಚಾಯತಿ ಅಧ್ಯಕ್ಷ ಅಪ್ಪಣ್ಣಾ ಇನಾಮತಿ ಮಾತನಾಡಿ, ರೈತರ ಹಿತಾಸಕ್ತಿಗಾಗಿ ಕೇಂದ್ರವನ್ನು ಆರಂಭಿಸಲಾಗಿದ್ದು, ಈಗಾಗಲೇ 400ಕ್ಕೂ ಹೆಚ್ಚು ರೈತರು ನೋಂದಣಿ ಮಾಡಿಸಿಕೊಂಡಿದ್ದಾರೆ. ಕೇಂದ್ರದಲ್ಲಿ ಪ್ರತಿ ಕ್ವಿಂಟಲ್ ಕಡಲೆ 5875 ರೂ. ಬೆಂಬಲ ಬೆಲೆಗೆ ಖರೀದಿಸಲಾಗುವುದು. ರೈತರ ಆಧಾರ್ ಸಂಖ್ಯೆಯೊಂದಿಗೆ ಜೋಡಿಸಿದ



ಬ್ಯಾಂಕ್ ಖಾತೆಗೆ ನೇರ ಡೆಬಿಟ್ ಮೂಲಕ ಹಣ ಜಮಾ ಮಾಡಲಾಗುತ್ತದೆ ಎಂದು ತಿಳಿಸಿದರು.

ಪ್ರತಿ ಎಕರೆಗೆ 4 ಕ್ವಿಂಟಲ್ ಹಿಸಾಬಿನಿಂದ ಒಬ್ಬ ರೈತರಿಂದ ಗರಿಷ್ಠ 40 ಕ್ವಿಂಟಲ್ ಮಟ್ಟಿಗೆ ಕಡಲೆ ಖರೀದಿಸಲು ಅವಕಾಶ ನೀಡಲಾಗಿದೆ. ಕುರ್ತಕೋಟಿ ಗ್ರಾಮ ಮತ್ತು ಸುತ್ತಮುತ್ತಲಿನ ರೈತರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಗ್ರಾಮ ಪಂಚಾಯತಿ ಅಧಿಕಾರಿಗಳು ಸೂಚಿಸಿದ್ದಾರೆ.

ಕೇಂದ್ರ ಉದ್ಘಾಟನೆ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಬಸವರಾಜ ಮಣ್ಣೂರ, ನಿರ್ದೇಶಕ ಸೋಮರಡ್ಡಿ ಹೊಸಮನಿ, ಶಿವಮೂರ್ತಯ್ಯ ಹಿರೇಮಠ, ಫಕ್ರುಸಾಬ ತಹಶೀಲ್ದಾರ, ಬಸಪ್ಪ ಕೋಣನವರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

### ಜೆಎಸ್‌ಡಬ್ಲ್ಯೂ ಎನ್‌ಡಿ ಪ್ಲಾಂಟ್‌ನಿಂದ ಧೂಳು–ಹೊಗೆ, ಭಾರಿ ವಾಹನ ಸಂಚಾರದಿಂದ ಜನಾರೋಗ್ಯ ಹಾಗೂ ಬೆಳೆಗಳಿಗೆ ಹಾನಿ ಆರೋಪ

# ಪರಿಸರಕ್ಕೆ ಮಾರಕವಾಗಿರುವ ಕಾರ್ಖಾನೆ ವಿರುದ್ಧ ರೈತರ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಮರಬ್ಬಿಹಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ರೈತರು ಪರಿಸರಕ್ಕೆ ಹಾನಿಯಾಗುತ್ತಿರುವ ಕಾರ್ಖಾನೆ ವಿರುದ್ಧ ಹೋರಾಟಕ್ಕೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆ ನಡೆಸಿದರು.

ಸಭೆಯಲ್ಲಿ ಜೆಎಸ್‌ಡಬ್ಲ್ಯೂ ಖಾಸಗಿ ಎನ್‌ಡಿ ಪ್ಲಾಂಟ್‌ನಿಂದ ಸರ್ಕಾರದ ನಿಯಮಗಳನ್ನು ಮಿತಿಮೀರಿ ಕಾನೂನುಬಾಹಿರವಾಗಿ ನಡೆಯುತ್ತಿರುವ ಕಾರ್ಯಚಟುವಟಿಕೆಗಳ ಬಗ್ಗೆ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಖಾನೆಯಿಂದ ಹೊರಬರುತ್ತಿರುವ ಧೂಳು ಮತ್ತು ಹೊಗೆಯಿಂದ ವಾತಾವರಣ ಕಲ್ಮಶವಾಗುತ್ತಿದ್ದು, ಇದರಿಂದ ಜನರ ಆರೋಗ್ಯಕ್ಕೂ ಹಾಗೂ ಭೂಮಿಯಲ್ಲಿ ಬೆಳೆಯುವ ವಿವಿಧ ಬೆಳೆಗಳಿಗೆ ಹಾನಿಯಾಗುತ್ತಿದೆ ಎಂದು ರೈತರು ದೂರಿದರು.

ಪ್ರಾಣಿ–ಪಕ್ಷಿಗಳಿಗೂ ಧೂಳಿನಿಂದ ಹಾನಿಯಾಗುವ ಪರಿಸ್ಥಿತಿ ಉಂಟಾಗಿದೆ. ಜೊತೆಗೆ ಕಾರ್ಖಾನೆಗೆ ಸಂಬಂಧಿಸಿದ ಭಾರಿ ವಾಹನಗಳು ನಿರಂತರವಾಗಿ ಸಂಚರಿಸುವುದರಿಂದ ರಸ್ತೆಯ ಸಮಸ್ಯೆಯೂ ಹೆಚ್ಚಾಗಿದೆ ಎಂದು ಸಭೆಯಲ್ಲಿ ಚರ್ಚಿಸಲಾಯಿತು.



**ಸಭೆಯಲ್ಲಿ ಚರ್ಚೆಯಾದ ಪ್ರಮುಖ ಅಂಶಗಳು**

1. ಜೆಎಸ್‌ಡಬ್ಲ್ಯೂ ಎನ್‌ಡಿ ಪ್ಲಾಂಟ್‌ನ ಕಾರ್ಯಚಟುವಟಿಕೆಗಳ ವಿರುದ್ಧ ರೈತರ ಆಕ್ರೋಶ
2. ಕಾರ್ಖಾನೆಯಿಂದ ಹೊರಬರುವ ಧೂಳು–ಹೊಗೆಯಿಂದ ವಾತಾವರಣ ಕಲ್ಮಶ
3. ಜನಾರೋಗ್ಯ, ಬೆಳೆಗಳು ಹಾಗೂ ಪ್ರಾಣಿ–ಪಕ್ಷಿಗಳಿಗೆ ಹಾನಿ
4. ಭಾರಿ ವಾಹನ ಸಂಚಾರದಿಂದ ರಸ್ತೆ ಸಮಸ್ಯೆ
5. ಉಪನಾಯಕನಹಳ್ಳಿ ಸಬ್‌ಸ್ಟೇಷನ್‌ನಲ್ಲಿ ಹೆಚ್ಚುವರಿ ವಿದ್ಯುತ್ ಸಂಪರ್ಕ ಟೆಂಡರ್ ಸ್ಥಗಿತ
6. ರೈತ ಸಂಘದ ಗ್ರಾಮ ಘಟಕ ಸಮಿತಿಗಳನ್ನು ರಚಿಸುವ ನಿರ್ಧಾರ

ಇದಲ್ಲದೆ ಉಪನಾಯಕನಹಳ್ಳಿ ಸಬ್‌ಸ್ಟೇಷನ್‌ನಲ್ಲಿ ಹೆಚ್ಚುವರಿ ವಿದ್ಯುತ್ ಸಂಪರ್ಕಕ್ಕೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ನಿಂತಿರುವ ವಿಚಾರದ ಬಗ್ಗೆ ಚರ್ಚೆ ನಡೆಸಲಾಯಿತು. ರೈತ ಸಂಘದ ಗ್ರಾಮ ಘಟಕ ಸಮಿತಿಗಳನ್ನು ರಚಿಸಲು ಕ್ರಮ ಕೈಗೊಳ್ಳುವ ನಿರ್ಧಾರವೂ ಸಭೆಯಲ್ಲಿ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಜೆ.ಎಂ. ವೀರಸಂಗಯ್ಯ, ಬಿ. ಗೋಣಿಬಸಪ್ಪ, ವಿಜಯನಗರ ಜಿಲ್ಲಾ ಯುವ ಘಟಕದ ಜಿಲ್ಲಾಧ್ಯಕ್ಷ ರವಿಕುಮಾರ್ ತಂಬ್ರಹಳ್ಳಿ ಸೇರಿದಂತೆ ಪಿ. ಸೂರ್ಯಬಾಬು, ಸೊಸೈಟಿ ನಾಗಪ್ಪ, ಡೊಳ್ಳಿನ ನಾಗಪ್ಪ, ಡಿ. ನಿಂಗರಾಜ್, ಮೆಕ್ಯಾನಿಕ್ ಹನುಮಂತಪ್ಪ, ಸೇವಾ ನಾಯ್ಕ ಎಂ. ನಾಗೇಂದ್ರಪ್ಪ, ಟಿ. ಚಂದ್ರಪ್ಪ, ಕುರುಬರ ಅಂಬಣ್ಣ, ಪಿ. ರಾಜಲಿಂಗಪ್ಪ, ಬಾರಿಕರ ಮದಗರ್ ಹುಚ್ಚಪ್ಪ, ಸರ್ದಾರ್ ಹುಲಗಪ್ಪ ಹಾಗೂ ನಾರಾಯಣಕೆರೆ, ಮರಬ್ಬಿಹಾಳ ಮತ್ತು ಸುತ್ತಮುತ್ತಲಿನ ಗ್ರಾಮಗಳ ರೈತರು ಉಪಸ್ಥಿತರಿದ್ದರು.

> "ಕಾರ್ಖಾನೆಯಿಂದ ಹೊರಬರುತ್ತಿರುವ ಧೂಳು ಹಾಗೂ ಹೊಗೆಯಿಂದ ಪರಿಸರ, ಜನರ ಆರೋಗ್ಯ ಮತ್ತು ಕೃಷಿ ಬೆಳೆಗಳಿಗೆ ಗಂಭೀರ ಹಾನಿಯಾಗುತ್ತಿದೆ. ಸಮಸ್ಯೆ ಪರಿಹಾರವಾಗದಿದ್ದರೆ ರೈತರು ಹೋರಾಟ ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು."


ಕರ್ನಾಟಕ ಸರ್ಕಾರ

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ**

**ತಾಲೂಕು ಪಂಚಾಯತ್ ಗಜೇಂದ್ರಗಡ**

ಬಸ್ ಡಿಪೋ ಹತ್ತಿರ, ಗದಗ ರಸ್ತೆ, ಗಜೇಂದ್ರಗಡ–582114

email- eotpgajendragad@gmail.com

ನಂ:ತಾ.ಪಂ./ಗಜೇಂದ್ರಗಡ//ಟೆಂಡರ/2025–26 ದಿನಾಂಕ: 10.03.2026

**ಕೆಪಿಪಿ ಪೋರ್ಟಲ್ ಟೆಂಡರ್ ಪ್ರಕಟಣೆ**

**Standard Bid Document KW-1 [ದ್ವಿ–ಲಕೋಟೆ ಪದ್ಧತಿ]**

ಕರ್ನಾಟಕ ರಾಜ್ಯದ ಮಾನ್ಯ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ಗಜೇಂದ್ರಗಡ ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000 ಪ್ರಕಾರ ಪಾರದರ್ಶಕತೆ ಆಕ್ಟ್ 2000 ನಿಯಮದಂತೆ Standard Bid Document KW-1ರ ನಿಯಮಗಳನ್ವಯ ಅರ್ಹ ಗುತ್ತಿಗೆದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ ಈ ಕೆಳಗೆ ನಮೂದಿಸಿದ ಮಂಜೂರಾದ ಕಾಮಗಾರಿಗಳಿಗೆ, ಲೆಕ್ಕ ಶೀರ್ಷಿಕೆ: 2515–00–102–0–62 (059) 2025–26ನೇ ಸಾಲಿನ ತಾಲೂಕ ಪಂಚಾಯತ ಅನಿರ್ಬಂಧಿತ ಅನುದಾನ ಯೋಜನೆಯಡಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಅರ್ಹ ಪೂರೈಕೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು.

**Indent Nos: RDPR/2025-26/IND13821**

ಸಾಮಾನ್ಯ ಸೂಚನೆಗಳು: 1) ಇ–ಪೋರ್ಟಲ್ ಮೂಲಕ ಮಾಹಿತಿ ಮತ್ತು ಸ್ಪಷ್ಟೀಕರಣ ಕೇಳಲು ಕೊನೆಯ **ದಿನಾಂಕ: 13/03/2026 ಮಧ್ಯಾಹ್ನ 2.00 ಗಂಟೆಯವರೆಗೆ** 2) ಇ–ಪೋರ್ಟಲ್ ಮೂಲಕ ಟೆಂಡರ್ ಸಲ್ಲಿಸಲು ಕೊನೆಯ **ದಿನಾಂಕ:13/03/2026 ಮಧ್ಯಾಹ್ನ 2.00 ಗಂಟೆಯವರೆಗೆ** 3) ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 17/03/2026 ಮಧ್ಯಾಹ್ನ 2.00 ಗಂಟೆಗೆ** 4) ಆರ್ಥಿಕ ಬಿಡ್ ತೆರೆಯುವ **ದಿನಾಂಕ: 18/03/2026 ಮಧ್ಯಾಹ್ನ 2.30 ಗಂಟೆಗೆ** ಹಾಗೂ ಯಾವುದೇ ಬಿಡ್ ನಿಗದಿತ ದಿನಾಂಕದ ಒಳಗಡೆ ಸಲ್ಲಿಕೆಯಾಗದಿದ್ದಲ್ಲಿ 3 ದಿನಗಳ ಸ್ವಯಂ ಚಾಲಿತವಾಗಿ ದಿನಾಂಕ ವಿಸ್ತರಣೆಯಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ಗಜೇಂದ್ರಗಡ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. **ದೂರವಾಣಿ ಸಂಖ್ಯೆಗಳು: 9741808701 & 9611453338** **ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:–** ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

**ಸಹಿ/– ಕಾರ್ಯನಿರ್ವಾಹಕ ಅಧಿಕಾರಿಗಳು**
**ತಾಲೂಕ ಪಂಚಾಯತ ಗಜೇಂದ್ರಗಡ**

ವಾ.ಸಾ.ಇ/ಗದಗ/701/ದೇಶಪಾಂಡೆಪಬ್ಲಿಸಿಟಿ/2025–26

## ಮಾ. 18ರಿಂದ ನೀಲಗುಂದ ಗ್ರಾಮದಲ್ಲಿ ದುರ್ಗಾದೇವಿ ಜಾತ್ರಾ ಮಹೋತ್ಸವ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ನೀಲಗುಂದ ಗ್ರಾಮದ ಶ್ರೀ ದುರ್ಗಾದೇವಿ ದೇವಸ್ಥಾನದ ಕಳಸಾರೋಹಣ ಹಾಗೂ ಜಾತ್ರಾ ಮಹೋತ್ಸವವು ನೀಲಗುಂದ ಗುದ್ನೇಶ್ವರ ಮಠದ ಅನುಷ್ಠಾನಯೋಗಿ ಪರಮಪೂಜ್ಯ ಶ್ರೀ ಪ್ರಭು ಲಿಂಗದೇವರು ಅವರ ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ.

ಮಾರ್ಚ್ 18 ರಂದು ಬುಧವಾರ ಜಾತ್ರಾ ಮಹೋತ್ಸವ ಆರಂಭವಾಗಲಿದೆ. ಆ ದಿನ ಸಕಲ ವಾದ್ಯಗಳೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ಕುಂಭ ಮೇಳದೊಂದಿಗೆ ನೂತನ ಕಳಸದ ಮೆರವಣಿಗೆ ನಡೆಯಲಿದೆ.

ಮಾರ್ಚ್ 19 ರಂದು ಗುರುವಾರ ಬೆಳಿಗ್ಗೆ 8 ಗಂಟೆಗೆ ನೂತನ ಕಳಸಾರೋಹಣ ಕಾರ್ಯಕ್ರಮ ನಡೆಯಲಿದ್ದು, ನಂತರ ಮಧ್ಯಾಹ್ನ 12 ಗಂಟೆಗೆ ರಂಗೋಲಿ ಸ್ಪರ್ಧೆ ಆಯೋಜಿಸಲಾಗಿದೆ.

ಮಾರ್ಚ್ 20 ರಂದು ಶುಕ್ರವಾರ ಶ್ರೀ ದುರ್ಗಾದೇವಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ. ಮಾರ್ಚ್ 21 ರಂದು ಶನಿವಾರ ಬೆಳಿಗ್ಗೆ 8 ಗಂಟೆಗೆ ಶ್ರೀ ದುರ್ಗಾದೇವಿಯ ಅಗ್ನಿ ಪ್ರವೇಶ ಕಾರ್ಯಕ್ರಮ ನಡೆಯಲಿದ್ದು, ಸಂಜೆ 5 ಗಂಟೆಗೆ ಬೊಂಬಾಟ್ ಮೆಲೋಡಿಸ್ ನೀಲಗುಂದ ಹಾಗೂ ಜೈಭೀಮ್ ಜಾನಪದ ಕಲಾತಂಡ ನೀಲಗುಂದ ಇವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ. ಈ ಕುರಿತು ದುರ್ಗಾದೇವಿ ದೇವಸ್ಥಾನ ಸೇವಾ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹಳ್ಳಿಗಳಲ್ಲಿ ಕೃಷಿ ಮತ್ತು ಹೈನುಗಾರಿಕೆ ಜ್ಞಾನ ಮರುಸ್ಥಾಪನೆಗೆ ಸಖಿಯರ ಸೇವೆ ಅಗತ್ಯ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್**

# ಗ್ರಾಮೀಣ ಅಭಿವೃದ್ಧಿಗೆ ಕೃಷಿ-ಪಶು ಸಖಿಯರ ಸೇವೆ ಅನಿವಾರ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಮಟ್ಟದಲ್ಲಿ ಕೃಷಿ ಹಾಗೂ ಹೈನುಗಾರಿಕೆ ಸಂಬಂಧಿಸಿದ ಜ್ಞಾನವನ್ನು ಮರುಸ್ಥಾಪಿಸುವಲ್ಲಿ 'ಕೃಷಿ ಸಖಿ' ಮತ್ತು 'ಪಶು ಸಖಿ'ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವಾದ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ "ಕೃಷಿ ಸಖಿ ಮತ್ತು ಪಶು ಸಖಿಗಳ ಪ್ರಗತಿ ಪರಿಶೀಲನೆ ಹಾಗೂ ಸಂವಾದ ಕಾರ್ಯಕ್ರಮ" ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ಮತ್ತು ಪಶು ಸಖಿಯರು ಕೇವಲ ವೇತನಕ್ಕಾಗಿ ಕೆಲಸ ಮಾಡುವವರಲ್ಲ. ಹಳ್ಳಿಗಳಲ್ಲಿ ಇತರ ಮಹಿಳೆಯರು ನಿರ್ವಹಿಸದ ಹಲವಾರು ಜವಾಬ್ದಾರಿಗಳನ್ನು ಹೊತ್ತು ಸ್ವಯಂಪ್ರೇರಿತರಾಗಿ



ಕಾರ್ಯನಿರ್ವಹಿಸುತ್ತಿದ್ದಾರೆ. ಆದ್ದರಿಂದ ಅವರ ಸೇವೆ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಹಿಂದಿನ ಕಾಲದಲ್ಲಿ ಕೃಷಿ ಮತ್ತು ಪಶುಪಾಲನೆ ಮಹಿಳೆಯರ ದೈನಂದಿನ ಬದುಕಿನ ಅವಿಭಾಜ್ಯ ಅಂಗವಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಆ ಜ್ಞಾನ ನಿಧಾನವಾಗಿ ಮರೆಯಾಗುತ್ತಿದ್ದು, ಅದನ್ನು ಮತ್ತೆ ಜನರಿಗೆ ಪರಿಚಯಿಸುವ ಜವಾಬ್ದಾರಿ ಕೃಷಿ ಹಾಗೂ ಪಶು ಸಖಿಯರ ಮೇಲಿದೆ ಎಂದು ತಿಳಿಸಿದರು.

"ನಮಗೆಲ್ಲವೂ ಗೊತ್ತಿದೆ" ಎಂಬ ಅಹಂಕಾರವನ್ನು ಬಿಟ್ಟು ಹೊಸ ವಿಚಾರಗಳನ್ನು ಕಲಿಯುವತ್ತ ಗಮನಹರಿಸಬೇಕು. ನಿಂತ ನೀರಾಗಿ ಕೊಳೆಯುವ ಬದಲು ನಿರಂತರವಾಗಿ ಬದಲಾಗುತ್ತಾ ಸುಧಾರಿಸಿಕೊಳ್ಳಬೇಕು ಎಂದು ಕರೆ ನೀಡಿದರು.

"ಗುರು ಇದ್ದರೆ ಗುರಿ" ಎಂಬ ಮಾತಿನಂತೆ ಗ್ರಾಮೀಣ ಮಹಿಳೆಯರಿಗೆ ಪ್ರತಿಯೊಂದು ಹಂತದಲ್ಲೂ ಮಾರ್ಗದರ್ಶನ ನೀಡುವ ಗುರುವಿನ ಸ್ಥಾನದಲ್ಲಿ ಸಖಿಯರು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

> "ನಮಗೆಲ್ಲವೂ ಗೊತ್ತಿದೆ ಎಂಬ ಅಹಂಕಾರವನ್ನು ಬಿಟ್ಟು ಹೊಸ ವಿಚಾರಗಳನ್ನು ಕಲಿಯಬೇಕು. ನಿಂತ ನೀರಾಗಿ ಕೊಳೆಯುವ ಬದಲು ನಿರಂತರವಾಗಿ ಬದಲಾಗುತ್ತಾ ಸುಧಾರಿಸಿಕೊಳ್ಳಬೇಕು. 'ಗುರು ಇದ್ದರೆ ಗುರಿ' ಎಂಬಂತೆ ಗ್ರಾಮೀಣ ಮಹಿಳೆಯರಿಗೆ ಮಾರ್ಗದರ್ಶನ ನೀಡುವ ಗುರುವಿನ ಸ್ಥಾನದಲ್ಲಿ ಕೃಷಿ ಮತ್ತು ಪಶು ಸಖಿಯರು ಕಾರ್ಯನಿರ್ವಹಿಸಬೇಕು."
>
> **– ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ. ಹುಲಗಣ್ಣವರ್, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಘುನಾಥಗೌಡ ಪಾಟೀಲ್, ಕೃಷಿ ಮತ್ತು ಪಶು ಸಖಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು. ಬಸವರಾಜ ಮೂಲಿಮನಿ ಕಾರ್ಯಕ್ರಮ ನಿರೂಪಿಸಿದರು.

**ತಾಲ್ಲೂಕು ನ್ಯಾಯಾಲಯ ಅಭಿವೃದ್ಧಿಗೆ 0.44 ಎಕರೆ ಜಮೀನು ನೀಡಬೇಕು: ವಕೀಲರ ಸಂಘ ಆಗ್ರಹ**

# ಮಂಜೂರಾದ ಜಾಗವನ್ನು ಬೇರೆ ಉದ್ದೇಶಕ್ಕೆ ಬಳಸುತ್ತಿರುವುದಕ್ಕೆ ಆಕ್ಷೇಪ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲ್ಲೂಕು ನ್ಯಾಯಾಲಯದ ಅಭಿವೃದ್ಧಿಗಾಗಿ ಈಗಾಗಲೇ ಪಕ್ಕದಲ್ಲಿರುವ 0.44 ಎಕರೆ ಜಮೀನನ್ನು ಹೆಚ್ಚುವರಿ ಕಟ್ಟಡ ನಿರ್ಮಾಣಕ್ಕೆ ನೀಡಬೇಕು ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ಕೊಟ್ರೇಶ್ ಶೆಟ್ಟರ್ ಆಗ್ರಹಿಸಿದರು.



ಪಟ್ಟಣದ ಪುರಸಭೆ ಕಚೇರಿಯಲ್ಲಿ ಕಂದಾಯ ಅಧಿಕಾರಿ ಮಾರೆಪ್ಪ ಅವರಿಗೆ ಮನವಿ ಪತ್ರ ಸಲ್ಲಿಸಿ ಅವರು ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಶಾಸಕರು ಹಾಗೂ ಲೋಕೋಪಯೋಗಿ ಇಲಾಖೆಯ ಶಿಫಾರಸ್ಸಿನ ಮೇರೆಗೆ ನ್ಯಾಯಾಲಯದ ಪಕ್ಕದಲ್ಲಿರುವ 0.44 ಎಕರೆ ಜಾಗವನ್ನು ಹೆಚ್ಚುವರಿ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಲಾಗಿದ್ದರೂ, ಕೆಲವು ಪಟ್ಟಭದ್ರ ಹಿತಾಸಕ್ತಿಗಳಿಂದ ಆ ಜಾಗವನ್ನು ಬೇರೆ ಉದ್ದೇಶಕ್ಕೆ ಬಳಸಲು ಯತ್ನಿಸಲಾಗುತ್ತಿದೆ. ಇದನ್ನು ತಾಲೂಕು ವಕೀಲರ ಸಂಘ ಉಗ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ಹಿರಿಯ ವಕೀಲೆ ವಿಶಾಲಾಕ್ಷಿ ಬಾಪೂಜಿ ಮಾತನಾಡಿ, ದಿನದಿಂದ ದಿನಕ್ಕೆ ನ್ಯಾಯಾಲಯಕ್ಕೆ ವ್ಯಾಜ್ಯ ಹಾಗೂ ವಿವಾದಗಳ ಸಂಖ್ಯೆ ಹೆಚ್ಚುತ್ತಿದ್ದು, ವಕೀಲರಿಗೆ ವಕಾಲತ್ತು ಮಾಡಲು ಹೆಚ್ಚಿನ ಸ್ಥಳಾವಕಾಶದ ಅಗತ್ಯವಿದೆ. ನ್ಯಾಯಾಲಯದ ಪಕ್ಕದಲ್ಲಿರುವ 0.44 ಎಕರೆ ಜಾಗವನ್ನು ಪುರಸಭೆ ಮಂಜೂರು ಮಾಡಿದರೆ ಎಲ್ಲರಿಗೂ ಅನುಕೂಲವಾಗಲಿದೆ ಎಂದು ಹೇಳಿದರು.

ವಕೀಲರ ಸಂಘದ ಮಾಜಿ ಅಧ್ಯಕ್ಷ ರಮೇಶ್ ಮಾತನಾಡಿ, ನ್ಯಾಯಾಲಯದ ಕಟ್ಟಡಕ್ಕೆ ಮಂಜೂರಾಗಿದ್ದ ಜಾಗವನ್ನು ತರಕಾರಿ ಮಾರುಕಟ್ಟೆಗೆ ಬಳಸಲು ಪುರಸಭೆ ತೆಗೆದುಕೊಂಡಿರುವ ನಿರ್ಧಾರವನ್ನು ವಕೀಲರ ಸಂಘ ಖಂಡಿಸುತ್ತದೆ ಎಂದು ತಿಳಿಸಿದರು.

ಸಂಘದ ಕಾರ್ಯದರ್ಶಿ ಬನ್ನಿಕಲ್ಲು ಶ್ರೀನಿವಾಸ ಮಾತನಾಡಿ, ಪಟ್ಟಣವು ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು, ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದೆ. ಇಂತಹ ಸಂದರ್ಭದಲ್ಲಿ ಉದ್ದೇಶಿತ ಜಾಗವನ್ನು ಬಿಟ್ಟು ನ್ಯಾಯಾಲಯದ ಹಿಂಭಾಗದಲ್ಲಿ ಜಾಗ ನೀಡಿದರೆ ಅನಾನುಕೂಲ ಉಂಟಾಗುತ್ತದೆ ಎಂದು ಹೇಳಿದರು.

ಹಿರಿಯ ವಕೀಲ ಅಶೋಕ ಕನಕೇರಿ ಮಾತನಾಡಿ, ನ್ಯಾಯದಾನ ಮಾಡುವವರಿಗೇ ನ್ಯಾಯ ಸಿಗದಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ವಕೀಲರ ಸಂಘದ ಅಧ್ಯಕ್ಷರ ಮೇಲಿನ ವೈಷಮ್ಯ ಅಥವಾ ಗುತ್ತಿಗೆದಾರರ ರಾಜಕೀಯ ಹುನ್ನಾರದಿಂದ ಈ ಬೆಳವಣಿಗೆ ಸಂಭವಿಸಿರುವುದು ದುರದೃಷ್ಟಕರವಾಗಿದೆ. ಪುರಸಭೆ ತಕ್ಷಣವೇ ಎಚ್ಚೆತ್ತುಕೊಂಡು ಬೇರೆ ಉದ್ದೇಶಕ್ಕಾಗಿ ಆರಂಭಿಸಿರುವ ಕೆಲಸವನ್ನು ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದರು.

ಹಿರಿಯ ವಕೀಲ ಸಿ. ಬಸವರಾಜ್ ಮಾತನಾಡಿ, ಈಗಿರುವ ನ್ಯಾಯಾಲಯದ ಸಂಕೀರ್ಣದ ಪಕ್ಕದಲ್ಲಿರುವ ಸ.ನಂ. 260ರ 3.44 ಎಕರೆ ಜಾಗದಲ್ಲಿ ಬರುವ 0.44 ಎಕರೆ ಜಾಗವನ್ನು ನೀಡಿದರೆ ನ್ಯಾಯಾಧೀಶರು ಹಾಗೂ ವಕೀಲರಿಗೆ ಓಡಾಡಲು ಅನುಕೂಲವಾಗುತ್ತದೆ ಮತ್ತು ಮುಂದಿನ ಪೀಳಿಗೆಗೂ ಸಹಕಾರಿ ಆಗಲಿದೆ. ನ್ಯಾಯಾಲಯದ ಹಿಂಭಾಗದಲ್ಲಿ ಜಾಗ ನೀಡುವುದರಿಂದ ಪ್ರಯೋಜನವಿಲ್ಲ. ಈಗಾಗಲೇ ನಿಗದಿಪಡಿಸಿರುವ ಜಾಗದಲ್ಲೇ ನೀಡಿದರೆ ಎಲ್ಲರಿಗೂ ಒಳಿತಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಸದಸ್ಯರಾದ ಟಿ.ಜಿ.ಎಂ. ಕೊಟ್ರೇಶ್, ಪ್ರಕಾಶ್, ಜಗದೀಶ್ ನಾಯ್ಕ್, ವೆಂಕಟೇಶ್, ಹುಲುಗಪ್ಪ, ಚಂದ್ರಶೇಖರ, ವೀಣಾ ಹೊಂಬಳ್, ರಶ್ಮಿ ಬಣಕಾರ, ರಾಕೇಶ್ ಗೌಡ, ಕೊಟ್ರೇಶ್ ಪೂಜಾರ, ಲಿಂಗನಗೌಡ, ಸುಭಾಷ್ ನಾಯ್ಕ್, ಅಂಜಿನೆಪ್ಪ, ಹಾಲೇಶ್ ಜಾಗಟಗೇರಿ, ಶಿವಪ್ರಕಾಶ್, ನರೇಂದ್ರಬಾಬು, ಲಕ್ಯಾ ನಾಯ್ಕ್, ಸಂತೋಷ್ ಕನಕೇರಿ, ಬಿ.ಎಂ. ಆಂಜನೇಯ, ಪೂರ್ಣಿಮಾ ಕನಕೇರಿ, ಶ್ರೀಮತಿ ಭಾರತಿ ಧರ್ಮಗೌಡ, ಕೆ. ಜಗದೀಶ್, ಟಿ. ಪ್ರಕಾಶ್, ಗುರುಬಸವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವಕೀಲರ ಸಂಘದ ಪ್ರಮುಖ ಬೇಡಿಕೆಗಳು

1. ನ್ಯಾಯಾಲಯದ ಪಕ್ಕದಲ್ಲಿರುವ 0.44 ಎಕರೆ ಜಮೀನು ನ್ಯಾಯಾಲಯ ಕಟ್ಟಡಕ್ಕೆ ನೀಡಬೇಕು.
2. ಬೇರೆ ಉದ್ದೇಶಕ್ಕಾಗಿ ನಡೆಯುತ್ತಿರುವ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಬೇಕು.
3. ಹೆಚ್ಚುತ್ತಿರುವ ಪ್ರಕರಣಗಳನ್ನು ಗಮನಿಸಿ ನ್ಯಾಯಾಲಯಕ್ಕೆ ಹೆಚ್ಚುವರಿ ಕಟ್ಟಡ ನಿರ್ಮಿಸಬೇಕು.

## ಅಂಬೇಡ್ಕರ್ ಪ್ರಶಸ್ತಿ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಎಪ್ರಿಲ್ 5 ಮತ್ತು ಎಪ್ರಿಲ್ 14 ರಂದು ಕ್ರಮವಾಗಿ ಡಾ. ಬಾಬು ಜಗಜೀವನ ರಾಂ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮದಿನಾಚರಣೆ ಅಂಗವಾಗಿ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ಪ್ರದಾನಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ ಡಾ. ಬಾಬು ಜಗಜೀವನ ರಾಂ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಅವರ ಹೆಸರಿನಲ್ಲಿ ಈ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ.

ಈ ಪ್ರಶಸ್ತಿಗಳಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಮೊದಲು ಮಾರ್ಚ್ 10, 2026 ಎಂದು ನಿಗದಿಪಡಿಸಲಾಗಿದ್ದು, ಇದೀಗ ಅದನ್ನು ಮಾರ್ಚ್ 15, 2026ರವರೆಗೆ ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತರು ಮಾರ್ಚ್ 15ರೊಳಗೆ ಸಮಾಜ ಕಲ್ಯಾಣ ಇಲಾಖೆಯ ಕೇಂದ್ರ ಕಚೇರಿ ಅಥವಾ ಸಂಬಂಧಿತ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಮಾಜ ಕಲ್ಯಾಣ ಅಧಿಕಾರಿಗಳ ಕಚೇರಿಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಲೋಕಾಯುಕ್ತ ಜನ ಸಂಪರ್ಕ ಸಭೆ ಮಾ. 11ರಂದು

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳಿಂದ ಮಾರ್ಚ್ 11, 2026 ರಂದು ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮುಂಡರಗಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳು ಹಾಗೂ ಅಹವಾಲುಗಳನ್ನು ಈ ಸಭೆಯಲ್ಲಿ ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕ ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಧೂಳು-ಹೊಗೆ ಸಮಸ್ಯೆ, ಭಾರಿ ವಾಹನ ಸಂಚಾರ ಹಾಗೂ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚೆ**

# ಜೆಎಸ್‌ಡಬ್ಲ್ಯು ಕಾರ್ಖಾನೆ ಮಾಲಿನ್ಯ ವಿರೋಧಿಸಿ ರೈತರ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಮರಬ್ಬಿಹಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ರೈತರು ಹಾಗೂ ರೈತ ಮುಖಂಡರೊಂದಿಗೆ ಪೂರ್ವಭಾವಿ ಸಭೆ ನಡೆಸಿ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಲಾಯಿತು.



ಜೆಎಸ್‌ಡಬ್ಲ್ಯು ಖಾಸಗಿ ಎನ್‌ಡಿ ಪ್ಲಾಂಟ್‌ನಿಂದ ಸರ್ಕಾರದ ನಿಯಮಗಳನ್ನು ಮೀರಿಸಿ ನಡೆಯುತ್ತಿರುವ ಕಾರ್ಯಚಟುವಟಿಕೆಗಳ ಬಗ್ಗೆ ಸಭೆಯಲ್ಲಿ ಅಸಮಾಧಾನ ವ್ಯಕ್ತವಾಯಿತು. ಕಾರ್ಖಾನೆಯಿಂದ ಹೊರಬರುತ್ತಿರುವ ಧೂಳು ಮತ್ತು ಹೊಗೆಯಿಂದ ವಾತಾವರಣ ಕಲ್ಮಶಗೊಳ್ಳುತ್ತಿದ್ದು, ಜನರ ಆರೋಗ್ಯಕ್ಕೆ ಹಾನಿಯಾಗುವುದರ ಜೊತೆಗೆ ಕೃಷಿ ಬೆಳೆಗಳು ಹಾಗೂ ಪ್ರಾಣಿ-ಪಕ್ಷಿಗಳಿಗೆ ಕೂಡ ಹಾನಿ ಉಂಟಾಗುತ್ತಿದೆ ಎಂದು ರೈತರು ಆಕ್ಷೇಪಿಸಿದರು.

ಇದೇ ವೇಳೆ ಕಾರ್ಖಾನೆ ಸಂಬಂಧಿತ ಭಾರಿ ವಾಹನಗಳು ರಸ್ತೆಯಲ್ಲಿ ನಿರಂತರ ಸಂಚಾರ ನಡೆಸುವುದರಿಂದ ಸಾರ್ವಜನಿಕರಿಗೆ ತೆ-ೂಂದರೆ ಉಂಟಾಗುತ್ತಿದೆ ಎಂಬುದನ್ನೂ ಸಭೆಯಲ್ಲಿ ಉಲ್ಲೇಖಿಸಲಾಯಿತು. ಉಪನಾಯಕನಹಳ್ಳಿ ಸಬ್‌ಸ್ಟೇಷನ್‌ನಲ್ಲಿ ಹೆಚ್ಚುವರಿ ವಿದ್ಯುತ್ ಸೌಲಭ್ಯ ಕಲ್ಪಿಸುವ ಟೆಂಡರ್ ಪ್ರಕ್ರಿಯೆ ನಿಂತಿರುವುದರಿಂದ ರೈತರಿಗೆ ಉಂಟಾಗುತ್ತಿರುವ ಸಮಸ್ಯೆಗಳ ಕುರಿತೂ ಚರ್ಚೆ ನಡೆಯಿತು.

ಅದರ ಜೊತೆಗೆ ಕರ್ನಾಟಕ ರಾಜ್ಯ ರೈತ ಸಂಘದ ಗ್ರಾಮ ಘಟಕಗಳ ಸಮಿತಿಯನ್ನು ರಚಿಸುವ ಬಗ್ಗೆ ಸಭೆಯಲ್ಲಿ ಪ್ರಾರಂಭಿಕ ಚರ್ಚೆ ನಡೆಯಿತು.

ಸಭೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ. ಗೋಣಿಬಸಪ್ಪ, ವಿಜಯನಗರ ಜಿಲ್ಲಾ ಯುವ ಘಟಕದ ಜಿಲ್ಲಾಧ್ಯಕ್ಷ ರವಿಕುಮಾರ್ ತಂಬ್ರಹಳ್ಳಿ, ಪಿ. ಸೂರ್ಯಬಾಬು, ಸೊಸೈಟಿ ನಾಗಪ್ಪ, ಡೊಳ್ಳಿನ ನಾಗಪ್ಪ, ಡಿ. ನಿಂಗರಾಜ್, ಮೆಕ್ಯಾನಿಕ್ ಹನುಮಂತಪ್ಪ, ಸೇವಾ ನಾಯ್ಕ ಎಂ. ನಾಗೇಂದ್ರಪ್ಪ, ಟಿ. ಚಂದ್ರಪ್ಪ, ಕುರುಬರ ಅಂಬಣ್ಣ, ಪಿ. ರಾಜಲಿಂಗಪ್ಪ, ಬಾರಿಕರ ಮದಗರ್ ಹುಚ್ಚಪ್ಪ, ಸರ್ದಾರ್ ಹುಲಗಪ್ಪ ಸೇರಿದಂತೆ ನಾರಾಯಣಕೆರೆ, ಮರಬ್ಬಿಹಾಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಉಪಸ್ಥಿತರಿದ್ದರು.

> "ಕಾರ್ಖಾನೆಯಿಂದ ಉಂಟಾಗುತ್ತಿರುವ ಧೂಳು ಮತ್ತು ಹೊಗೆಯಿಂದ ಪರಿಸರ ಹಾನಿಯಾಗುತ್ತಿದ್ದು, ರೈತರ ಬೆಳೆಗಳಿಗೂ ದೊಡ್ಡ ನಷ್ಟವಾಗುತ್ತಿದೆ. ಸಮಸ್ಯೆ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳಬೇಕು." ಎಂದು ರೈತ ಮುಖಂಡರು ಆಗ್ರಹಿಸಿದರು.

**ಪೋಷಕರ ಇಚ್ಛೆಗೆ ವಿರುದ್ಧವಾಗಿ ಸರ್ಕಾರದ ಸರ್ವಾಧಿಕಾರಿ ಧೋರಣೆ: ಎಐಡಿಎಸ್‌ಒ ಆರೋಪ**

# ಹೊಂಗನೂರು ಕೆಪಿಎಸ್ ಮ್ಯಾಗ್ನೆಟ್ ಶಾಲಾ ವಿಲೀನಕ್ಕೆ ತೀವ್ರ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಂಗನೂರು ಕೆಪಿಎಸ್ ಮ್ಯಾಗ್ನೆಟ್ ಶಾಲಾ ಯೋಜನೆಯ ಹೆಸರಿನಲ್ಲಿ ಸುತ್ತಮುತ್ತಲಿನ ಏಳು ಸರ್ಕಾರಿ ಶಾಲೆಗಳನ್ನು ಬಲವಂತವಾಗಿ ವಿಲೀನಗೊಳಿಸಲು ಮಾರ್ಚ್ 7ರಂದು ರಾಜ್ಯ ಸರ್ಕಾರ ಹೊರಡಿಸಿರುವ ಆದೇಶವನ್ನು ಎಐಡಿಎಸ್‌ಒ (೦ಖಆಖಔ) ಗದಗ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸಿದೆ.



ಈ ಕುರಿತು ಪ್ರಕಟಣೆ ನೀಡಿದ ಎಐಡಿಎಸ್‌ಒ ಜಿಲ್ಲಾ ಸಂಚಾಲಕಿ ಎಂ. ಶಾಂತಿ, ಹೂಡಿಕೆ ಹೊಸಹಳ್ಳಿ, ಕನ್ನೀದೊಡ್ಡಿ, ಅಮ್ಮಳ್ಳಿ ದೊಡ್ಡಿ, ಸಂತೆ ಮೊಗೇನಹಳ್ಳಿ ಮತ್ತು ಸುಣ್ಣಘಟ್ಟ ಸೇರಿದಂತೆ ಈ ಭಾಗದ ಹಳ್ಳಿ ಶಾಲೆಗಳನ್ನು ಮುಚ್ಚುವುದಕ್ಕೆ ಪೋಷಕರು ಹಾಗೂ ಸ್ಥಳೀಯ ಸಾರ್ವಜನಿಕರು ಈಗಾಗಲೇ ವಿರೋಧ ವ್ಯಕ್ತಪಡಿಸಿ ಹೋರಾಟ ನಡೆಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಪೋಷಕರು ತಮ್ಮ ಮಕ್ಕಳಿಗೆ ಹತ್ತಿರದ ಶಾಲೆಗಳಲ್ಲೇ ಶಿಕ್ಷಣ ಮುಂದುವರೆಯಬೇಕು ಮತ್ತು ಶಿಕ್ಷಕರನ್ನು ಸ್ಥಳಾಂತರ ಮಾಡಬಾರದು ಎಂಬ ನ್ಯಾಯಯುತವಾದ ಬೇಡಿಕೆಯನ್ನು ಮುಂದಿಟ್ಟಿದ್ದಾರೆ. ಆದರೆ ಸರ್ಕಾರವು ಜನರ ಮನೋಭಾವಕ್ಕೆ ಸ್ಪಂದಿಸುವ ಬದಲು ಕಟ್ಟುನಿಟ್ಟಿನ ಆದೇಶ ಹೊರಡಿಸಿ ಜನರ ಧ್ವನಿಯನ್ನು ಹತ್ತಿಕ್ಕಲು ಮುಂದಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಶಿಕ್ಷಣ ಇಲಾಖೆ ಇತ್ತೀಚೆಗೆ ಹೊರಡಿಸಿರುವ ಆದೇಶದಲ್ಲಿ ಈ ಶಾಲೆಗಳನ್ನು ಕೂಡಲೇ ವಿಲೀನಗೊಳಿಸಬೇಕು ಎಂದು ಒತ್ತಾಯಿಸಿರುವುದಲ್ಲದೆ, ಪೋಷಕರಿಗೆ ಮನವರಿಕೆ ಮಾಡಿಕೊಡುವಲ್ಲಿ ವಿಫಲರಾಗಿದ್ದಾರೆ ಎಂಬ ನೆಪವೊಡ್ಡಿ ಸ್ಥಳೀಯ ಶಿಕ್ಷಕರು ಹಾಗೂ ಅಧಿಕಾರಿಗಳ ಮೇಲೂ ಟೀಕೆ ಮಾಡಿರುವುದು ಸರ್ಕಾರದ ಹಠಮಾರಿ ಧೋರಣೆಯನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ.

ಗ್ರಾಮಗಳಲ್ಲಿನ ಶಾಲೆಗಳು ಕೇವಲ ಕಟ್ಟಡಗಳಲ್ಲ; ಅವು ಆ ಭಾಗದ ಬಡ ಮಕ್ಕಳ ಶಿಕ್ಷಣದ ಆಶ್ರಯವಾಗಿವೆ. ಇಂತಹ ಶಾಲೆಗಳಿಗೆ ಬೀಗ ಜಡಿಯುವ ಮೂಲಕ ಗ್ರಾಮೀಣ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಕ್ರಮವನ್ನು ಸರ್ಕಾರ ಕೈಬಿಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಪೋಷಕರು ತಮ್ಮ ಮಕ್ಕಳನ್ನು ಹೊಂಗನೂರು ಕೆಪಿಎಸ್ ಶಾಲೆಗೆ ಕಳುಹಿಸಲು ಸಿದ್ಧರಿಲ್ಲದಿದ್ದರೂ ಅವರ ಮೇಲೆ ಒತ್ತಡ ಹೇರುವುದು ಸಂವಿಧಾನಬದ್ಧವಾದ ಶಿಕ್ಷಣದ ಹಕ್ಕಿನ ಉಲ್ಲಂಘನೆಯಾಗಿದೆ. ಸರ್ಕಾರವು ಕೂಡಲೇ ವಿಲೀನ ಪ್ರಕ್ರಿಯೆಯನ್ನು ಕೈಬಿಟ್ಟು ಹಳ್ಳಿ ಶಾಲೆಗಳಲ್ಲಿಯೇ ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ಕೈಗೊಳ್ಳಬೇಕು. ಜನರ ವಿರೋಧವನ್ನು ನಿರ್ಲಕ್ಷಿಸಿ ಮುಂದುವರಿದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

### ಮುಖ್ಯ ಬೇಡಿಕೆಗಳು

1. ಹೊಂಗನೂರು ಕೆಪಿಎಸ್ ಮ್ಯಾಗ್ನೆಟ್ ಶಾಲಾ ವಿಲೀನ ಆದೇಶ ಹಿಂಪಡೆಯಬೇಕು
2. ಹಳ್ಳಿ ಸರ್ಕಾರಿ ಶಾಲೆಗಳನ್ನು ಮುಚ್ಚಬಾರದು
3. ಮಕ್ಕಳಿಗೆ ಹತ್ತಿರದ ಶಾಲೆಗಳಲ್ಲೇ ಶಿಕ್ಷಣ ಮುಂದುವರೆಯಲು ಅವಕಾಶ ನೀಡಬೇಕು
4. ಶಿಕ್ಷಕರ ಸ್ಥಳಾಂತರ ಮಾಡಬಾರದು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka